# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –253 | ಆರ್ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:02–05–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 253 | RNI No: KARKAN/2023/88462 | KA/SK/CTA-874/2024-2026 | Chitradurga | Date: 02-05-2025 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಅಂಗದ ಅವಗುಣಗಳನ್ನು ನಶಿಸುವುದಕ್ಕೆ ಅಂಗವಂತರಾಗಿ– ಓಂಕಾರ ಶ್ರೀ 2

ಜಾತಿಗಣತಿಗೆ ಸರ್ಕಾರ ಮುಂದಾಗಬೇಕು: ಇಮ್ಮಡಿ ಶ್ರೀ 3

ಕಾರ್ಮಿಕರು ದೈಹಿಕ ಮತ್ತು ಮಾನಸಿಕ ಶಕ್ತಿಯಾಗಿ ಹೊರಹೊಮ್ಮಬೇಕು 4



ಸುದ್ದಿ, ಜಾಹಿರಾತಿಗೆ 9686622252


# ನಕಲಿ ಕಾರ್ಮಿಕ ಕಾರ್ಡ್ ಪತ್ತೆ ಮಾಡಿ

» **ಚಿತ್ರದುರ್ಗ**

ಸರ್ಕಾರ ಕಾರ್ಮಿಕರಿಗಾಗಿ ವಿವಿಧ ರೀತಿಯ ಸೌಲಭ್ಯ ನೀಡುತ್ತಿದೆ. ಇದನ್ನು ಪಡೆಯಲು ಕೆಲವು ನಕಲಿ ಕಾರ್ಮಿಕರು ಕಾರ್ಡ್‌ಗಳನ್ನು ಪಡೆದಿದ್ದಾರೆ. ಈ ರೀತಿಯಾಗಿ ನಕಲಿ ಕಾರ್ಡ್‌ಗಳನ್ನು ಪಡೆದವರನ್ನು ಪತ್ತೆ ಮಾಡಿ ಅರ್ಹರಾದವರಿಗೆ ಸರ್ಕಾರದ ಸೌಲಭ್ಯಗಳು ಸಿಗುವಂತೆ ಮಾಡುವುದು ಕಾಂಗ್ರೆಸ್ ಕಾರ್ಮಿಕ ವಿಭಾಗದ ಪದಾಧಿಕಾರಿಗಳ ಕೆಲಸವಾಗಬೇಕಿದೆ ಎಂದು ಶಾಸಕ ಕೆ.ಸಿ.ವೀರೇಂದ್ರ ತಿಳಿಸಿದರು.

ಇಲ್ಲಿನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ನಡೆದ ಕಾರ್ಮಿಕರ ದಿನಾಚರಣೆ ಮಾತನಾಡಿದ ಅವರು, ರೈತ ಯಾವ ರೀತಿ ದೇಶದ ಬೆನ್ನುಲುಬು ಅದೇ ರೀತಿ ಕಾರ್ಮಿಕನೂ ಸಹಾ ದೇಶದ ಬೆನ್ನೆಲುಬು. ರೈತ ತನ್ನ ಪಾಲಿನ ಕೆಲಸ ಮಾಡದಿದ್ದರೆ ಜನರಿಗೆ ಅನ್ನ ಸಿಗುವುದಿಲ್ಲ. ಅದೇ ರೀತಿ ಕಾರ್ಮಿಕ ತನ್ನ ಪಾಲಿನ ಕೆಲಸ ಮಾಡದಿದ್ದರೆ ಜನರಿಗೆ ಬೇರೆ ರೀತಿಯ ಕೆಲಸಗಳು ಆಗುವುದಿಲ್ಲ. ದೇಶದ ಆರ್ಥಿಕತೆಯನ್ನು ಆಯಾ ದೇಶದ ಕಾರ್ಮಿಕರ ಸಂಖ್ಯೆಯನ್ನು ಪರಿಗಣಿಸಿ ನಿರ್ಧಾರ ಮಾಡಲಾಗುತ್ತದೆ. ಇದರಿಂದಲೇ ಜಿಡಿಪಿಯನ್ನು ಸಹಾ ನಿರ್ಧಾರ ಮಾಡಲಾಗುತ್ತದೆ ಎಂದರು.

ರಾಜ್ಯದಲ್ಲಿ ಆಡಳಿತವನ್ನು ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕಾರ್ಮಿಕರಿಗಾಗಿ ವಿವಿಧ ರೀತಿಯ ಯೋಜನೆಯನ್ನು ಜಾರಿ ಮಾಡಿದೆ. ಇದನ್ನು ತಿಳಿದ ಕೆಲವರು ಕಾರ್ಮಿಕ ಇಲಾಖೆಯಲ್ಲಿ ನಕಲಿ ಕಾರ್ಡ್‌ಗಳನ್ನು ಮಾಡಿಸಿಕೊಂಡು ಸರ್ಕಾರದ ಸೌಲಭ್ಯವನ್ನು ಪಡೆದು ಅರ್ಹರಿಗೆ



ವಂಚನೆಯನ್ನು ಮಾಡುತ್ತಿದ್ದಾರೆ. ಇದರ ಬಗ್ಗೆ ನಮ್ಮ ಕಾಂಗ್ರೆಸ್ ಪಕ್ಷದ ಕಾರ್ಮಿಕ ವಿಭಾಗದ ಪದಾಧಿಕಾರಿಗಳು ಅಂತಹ ನಕಲಿ ಕಾರ್ಡ್‌ದಾರನ್ನು ಪತ್ತೆ ಮಾಡಿ ಅವರಿಂದ ಕಾರ್ಡ್‌ಗಳನ್ನು ವಾಪಾಸ್ಸು ಇಲಾಖೆಗೆ ಕೊಡಿಸುವ ಕಾರ್ಯವನ್ನು ಮಾಡಬೇಕಿದೆ. ಈ ಕೆಲಸವನ್ನು ಇಲಾಖೆಯ ಅಧಿಕಾರಿಗಳು ಸಹಾ ಮಾಡುತ್ತಿದ್ದಾರೆ. ಅವರ ಜೊತೆಗೆ ನೀವುಗಳ ಕೈ ಜೋಡಿಸಿ ಎಂದು ಕರೆ ನೀಡಿದರು.

ಕಾಂಗ್ರೆಸ್ ಪಕ್ಷದ ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಮಹಮ್ಮದ್ ಸೈಯದ್ ಚೋಟು ಮಾತನಾಡಿ, ರಾಜ್ಯ ಸರ್ಕಾರದಲ್ಲಿ ಕಾರ್ಮಿಕ ಸಚಿವರಾಗಿರುವ ಸಂತೋಷ ಲಾಡ್ ರವರು ಕಾರ್ಮಿಕರ ಕಷ್ಟಗಳನ್ನು ಅರಿತ್ತಿದ್ದಾರೆ. ಈ ಹಿನ್ನಲೆಯಲ್ಲಿ ಅವರಿಗೆ ವಿವಿಧ ರೀತಿಯ ಸೌಲಭ್ಯವನ್ನು ನೀಡುತ್ತಿದ್ದಾರೆ. ನಮ್ಮ ಕಾರ್ಮಿಕ ವಿಭಾಗಕ್ಕೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ಸಮಾವೇಶವನ್ನು ಮುಂದಿನ ದಿನದಲ್ಲಿ ದಾವಣಗೆರೆಯಲ್ಲಿ ಹಮ್ಮಿಕೊಳ್ಳಲಾಗುವುದು, ಹಿಂದಿನ ಸರ್ಕಾರ ಕಾರ್ಮಿಕರಿಗೆ ತುಂಬಾ ಅನ್ಯಾಯವನ್ನು ಮಾಡಿತ್ತು ಅದನ್ನು ನಮ್ಮ ಸರ್ಕಾರ ಸರಿಪಡಿಸುತ್ತಿದೆ, ಕಾರ್ಮಿಕರಿಗೆ ಸರ್ಕಾರ ಇನ್ನೂ ಹೆಚ್ಚಿನ ರೀತಿಯ ಸೌಲಭ್ಯವನ್ನು ನೀಡುವಂತಾಗಬೇಕಿದೆ ಎಂದರು.

ಬಡಗಿ ಕಾರ್ಮಿಕರ ಸಂಘದ ಅಧ್ಯಕ್ಷ ಜಾಕಿರ್ ಹುಸೇನ್ ಮಾತನಾಡಿ, ಕಾರ್ಮಿಕರಿಗೆ ಸರ್ಕಾರ ವಿವಿಧ ರೀತಿಯ ಸೌಲಭ್ಯವನ್ನು ನೀಡಬೇಕಿದೆ, ಕಾರ್ಮಿಕರಿಗೆ ಸರ್ಕಾರದವತಿಯಿಂದ ಸಿಗುವಂತ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ಕಾರ್ಮಿಕ ವಿಭಾಗದವರು ನೀಡಬೇಕಿದೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಕಾರ್ಮಿಕ ಪಾತ್ರ ಬಹಳಷ್ಟು ಇದೆ. ಅವರು ಹಾಕಿದವ ಮತದಿಂದ ಪಕ್ಷದ ಅಧಿಕಾರ ಹಿಡಿಯಲು ಸಹಕಾರಿಯಾಗಿದೆ, ಇದನ್ನು ಮನಗಂಡು ಶಾಸಕರಾದವರು ಕಾರ್ಮಿಕರ ಹಿತವನ್ನು ಕಾಯಬೇಕಿದೆ, ಅವರನ್ನು ಎಂದಿಗೂ ಸಹಾ ಮರೆಯಬಾರದು, ಕಾರ್ಮಿಕವನ್ನು ನಮ್ಮ ಜೊತೆಯಲ್ಲಿ ಇಟ್ಟುಕೊಂಡಲ್ಲಿ ಮುಂದಿನ ಬಾರಿಯೂ ಸಹಾ ನಮ್ಮ ಕಾಂಗ್ರೆಸ್ ಪಕ್ಷ ಹೆಚ್ಚಿನ ಸ್ಥಾನವನ್ನು ಪಡೆಯಲು ಅನುಕೂಲವಾಗುತ್ತದೆ ಎಂದರು.

ಡಿಸಿಸಿ ಅಧ್ಯಕ್ಷ ತಾಜ್‌ಪೀರ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಕಾರ್ಯಕ್ರಮದಲ್ಲಿ ಟಿಪ್ಪು ಖಾಸಿಂಆಲಿ, ಪ್ರಕಾಶ ರಾಮನಾಯ್ಕ್, ಖುದ್ದುಸ್, ಮಂಜುನಾಥ್, ಅಕ್ಬರ್, ಸಮೀವುಲ್ಲಾ, ಯೂಸಿಫ್, ಹಸೀನ, ಅಬ್ದುಲ್ ರಹಿಂ, ಜ್ಯೋತಿ ಲಕ್ಷ್ಮೀ, ನಾಗರಾಜ್ ಭಾಗವಹಿಸಿದ್ದರು. ಸಂಪತ್ ಕುಮಾರ್ ಸ್ವಾಗತಿಸಿದರು, ಮೈಲಾರಪ್ಪ ಕಾರ್ಯಕ್ರಮ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸದಸ್ಯತ್ವವನ್ನು ಮಾಡಿದ ಜ್ಯೋತಿ ಲಕ್ಷ್ಮಿ, ಹಾಗೂ ಸಚಿನ್ ರವರನ್ನು ಸನ್ಮಾನಿಸಲಾಯಿತು.

## ಜಾತಿಗಣತಿಕಾರ್ಯದಲ್ಲಿ ಪಾಲ್ಗೊಳ್ಳಿ; ಆಂಜನೇಯ
### ಪರಿಶಿಷ್ಟರೆಲ್ಲರೂ ಜಾಗೃತಿಗೊಳ್ಳಲಿ –ತಮ್ಮ ಪಾಲು ಪಡೆಯಲು ಮುಂದಾಗಿ

» **ಚಿತ್ರದುರ್ಗ**

ಸ್ವತಂತ್ರ ಭಾರತದಲ್ಲಿ ಮೊದಲ ಬಾರಿಗೆ ಜಾತಿಗಣತಿ ನಡೆಸಿದ ಹೆಗ್ಗಳಿಕೆ ಹೊಂದಿರುವ ಸಿಎಂ ಸಿದ್ದರಾಮಯ್ಯ ಅವರ ಹಾದಿಯಲ್ಲಿಯೇ ಕೇಂದ್ರ ಸರ್ಕಾರ ಮುಂದಾಗಿರುವುದು ಸ್ವಾಗತಾರ್ಹ ಎಂದು ಮಾಜಿ ಸಚಿವ ಎಚ್. ಆಂಜನೇಯ ತಿಳಿಸಿದ್ದಾರೆ.

ಸಿದ್ದರಾಮಯ್ಯ ಅವರು ಜಾತಿಗಣತಿ ಕಾರ್ಯಕ್ಕೆ ಮುಂದಾದ ಸಂದರ್ಭ ಕೆಲವರು ರಾಜಕೀಯ ಕಾರಣಕ್ಕೆ ಟೀಕೆ ಮಾಡಿದರು. ಆದರೆ, ನಾವುಗಳು ಅಂತಹ ಹಾದಿಯಲ್ಲಿ ಸಾಗುವುದಿಲ್ಲ. ಇಡೀ ದೇಶದಲ್ಲಿಯೇ ಜನಗಣತಿ ಜೊತೆಗೆ ಜಾತಿಗಣತಿ ಕಾರ್ಯ ಮಾಡಲು ಕೈಗೊಂಡಿರುವ ನರೇಂದ್ರ ಮೋದಿ ಅವರ ಕಾರ್ಯ ಸ್ವಾಗತಾರ್ಹ ಎಂದಿರುವ ಎಚ್. ಆಂಜನೇಯ, ಮುಖ್ಯವಾಗಿ ಎಲ್ಲ ಧರ್ಮ, ಜಾತಿಯವರ ಸಮಗ್ರ ದತ್ತಾಂಶ ಸಂಗ್ರಹ ಕಾರ್ಯಕ್ಕೆ ಅನುಕೂಲವಾಗುವ ಕೈಪಿಡಿ



ಸಿದ್ಧಪಡಿಸಿ ತುರ್ತಾಗಿ ಜಾತಿಗಣತಿ ಕಾರ್ಯ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಪರಿಶಿಷ್ಟ ಸಮುದಾಯದಲ್ಲಿ ಮೀಸಲಾತಿ ಬಳಕೆಯಲ್ಲಿ ಆಗಿರುವ ಅ ಸ ್ ವ ್ ೨ ಾ ನ ್ ತ ್ ಹ ್ ೂ ಗ ್ ಲಾ ಡ ಿ ಸ ್ ಲ ು ಒಳಮೀಸಲಾತಿ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ 30 ವರ್ಷಗಳ ಹೋರಾಟದ ಫಲ ಒಳಮೀಸಲಾತಿ ಜಾರಿಗೊಳಿಸುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

ಒಳಮೀಸಲಾತಿ ಜಾರಿಯಿಂದ ಯಾವುದೇ ಸಮುದಾಯಕ್ಕೆ ಅನ್ಯಾಯವಾಗದು. ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಯ ಎಲ್ಲರಿಗೂ ಅನುಕೂಲವಾಗಲಿದೆ. ಎಸ್ಸಿಯಲ್ಲಿಯೇ ಗುಂಪುಗಳನ್ನಾಗಿಸಿವಿಂಗಡಿಸಿಮೀಸಲಾತಿಹಂಚಿಕೆ ಮಾಡುವುದರಿಂದ ಎಲ್ಲ ಸಮುದಾಯಗಳು ಮುಖ್ಯವಾಹಿನಿಗೆ ಬರಲು ಸಹಕಾರಿ ಆಗಲಿದೆ ಎಂದಿದ್ದಾರೆ.

ಈ ಹಿನ್ನೆಲೆಯಲ್ಲಿ ಒಳಮೀಸಲಾತಿ ಜಾರಿಗೆ ಹಾಗೂಯಾವಸಮುದಾಯಕ್ಕೂಅನ್ಯಾಯವಾದ ರೀತಿ ಜನಸಂಖ್ಯೆಗನುಗುಣವಾಗಿ ಮೀಸಲಾತಿ ಹಂಚಿಕೆ ಮಾಡಲು ಸಾಮಾಜಿಕ ನ್ಯಾಯದ ಹರಿಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದು,ನ್ಯಾಯಮೂರ್ತಿನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಸೀಮಿತಗೊಳಿಸಿ ಜಾತಿಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದೆ. ಈ ನಡೆ ಎಸ್ಸಿಯಲ್ಲಿರುವ ಎಲ್ಲ ಜಾತಿ ಜನರು ಸರ್ಕಾರದ ಸೌಲಭ್ಯ ಪಡೆದುಕೊಳ್ಳಲು ಮಾನದಂಡವಾಗಲಿದೆ ಎಂದು ತಿಳಿಸಿದ್ದಾರೆ.

ಪುಟ ↘ 2

## ಅಪಘಾತದಿಂದ ಗಾಯಗೊಂಡರನ್ನು ಆಸ್ಪತ್ರೆಗೆ ಸೇರಿಸಿ ಮಾನವೀಯತೆ ಮೆರೆದ ಜಗಳೂರು ಶಾಸಕ ಪುತ್ರ

ದಾವಣಗೆರೆ : ತಾಲೂಕಿನ ಮೆಳ್ಳೇಕಟ್ಟೆ ಗ್ರಾಮದ ಬಳಿ ರಸ್ತೆ ಅಪಘಾತದಿಂದ ಅಸ್ವಸ್ಥಗೊಂಡಿದ್ದ ಗಾಯಾಳುಗಳಿಗೆ ಸೂಕ್ತ ಸಮಯದಲ್ಲಿ ಆಸ್ಪತ್ರೆಗೆ



ಸೇರಿಸಲು ಜಗಳೂರು ಶಾಸಕರಾದ ಬಿ ದೇವೇಂದ್ರಪ್ಪ ಪುತ್ರ ಎಂ.ಡಿ ಕೀರ್ತಿ ಕುಮಾರ್ ನೆರವಾಗುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ಹೌದು ದಾವಣಗೆರೆಯಿಂದ ಜಗಳೂರು ಪಟ್ಟಣಕ್ಕೆ ಕಾರಿನಲ್ಲಿ ಎಂ.ಡಿ ಕೀರ್ತಿ ಕುಮಾರ್ ತೆರಳುತ್ತಿದ್ದ ವೇಳೆ ಮೆಳ್ಳೇಕಟ್ಟೆ ಗ್ರಾಮದ ಬಳಿ ರಸ್ತೆ ಅಪಘಾತ ಸಂಭವಿಸಿದೆ. ಈ ವೇಳೆ ಅದೇ ಮಾರ್ಗದಲ್ಲಿ ಬರುತ್ತಿದ್ದ ಕೀರ್ತಿ ಕುಮಾರ್ ತಕ್ಷಣ ವಾಹನ ನಿಲ್ಲಿಸಿ ಅಪಘಾತದಿಂದ ಗಾಯಗೊಂಡವರನ್ನು ತಮ್ಮ ಕಾರಿನಲ್ಲಿ ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲು ಕರೆದುಕೊಂಡು ಹೋಗಿದ್ದಾರೆ, ಬಳಿಕ ಅಂಬ್ಯುಲೆನ್ಸ್ ಬಂದ ಹಿನ್ನೆಲೆ ಗಾಯಾಳುಗಳನ್ನು ಅಂಬ್ಯುಲೆನ್ಸ್ ಮೂಲಕ ಜಿಲ್ಲಾ ಚಿಗಟೇರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ದಾಖಲು ಮಾಡಿ ಚಿಕಿತ್ಸೆ ನೀಡಲಾಗಿದೆ.

ಪುಟ ↘ 2

**ಪ್ರಮುಖ ಸುದ್ದಿ**

# 12ರಂದು ಚಳ್ಳಕೆರೆ ಶ್ರೀವೀರಭದ್ರಸ್ವಾಮಿ ಭವ್ಯ ರಥೋತ್ಸವ


» **ಚಳ್ಳಕೆರೆ**

ಚಳ್ಳಕೆರೆ ನಗರದ ಗ್ರಾಮದೇವರು ಶ್ರೀವೀರಭದ್ರಸ್ವಾಮಿ ಪ್ರಸ್ತುತ ವಿಶ್ವವಸುನಾಮಸಂವತ್ಸರದ ಜಾತ್ರೆ ಮೇ.8ರಿಂದ14ವರೆಗೂ ನಡೆಯುವುದು ಎಂದು ದೇವಸ್ಥಾನದ ಧರ್ಮದರ್ಶಿ ಗೌಡ್ರ ಪಿ.ಜಿ.ರಾಮಣ್ಣ ತಿಳಿಸಿದ್ದಾರೆ.

ಅವರು ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಶ್ರೀವೀರಭದ್ರಸ್ವಾಮಿ ಜಾತ್ರೆ ಹಿನ್ನೆಲೆಯಲ್ಲಿ ಈಗಾಗಲೇ ದೇವಸ್ಥಾನದ ಆಡಳಿತಮಂಡಳಿ, ಭಕ್ತರು ಹಾಗೂ ಆಯಗಾರರು ಸಭೆ ಸೇರಿ ಚರ್ಚಿಸಿ ಜಾತ್ರಾ ಮಹೋತ್ಸವ ಯಶಸ್ವಿಗೊಳಿಸುವ ಬಗ್ಗೆ ನಿರ್ಧರಿಸಿದ್ದು, ಸ್ವಾಮಿಯ ಜಾತ್ರೆಯೊಂದಿಗೆ ಪ್ರತಿವರ್ಷದಂತೆ ಈ ವರ್ಷವೂ ದನಗಳ ಜಾತ್ರೆಯೂ ಸಹ ನಡೆಸಲಾಗುವುದು. ಜಾತ್ರಾ ಸಂದರ್ಭದಲ್ಲಿ ದೇವಸ್ಥಾನದಲ್ಲಿ ಶ್ರೀಸ್ವಾಮಿಗೆ ವಿಶೇಷ ಪೂಜಾ ಕಾರ್ಯಗಳನ್ನು ನಡೆಸಲಾಗುತ್ತದೆ ಎಂದಿದ್ದಾರೆ.

ಮೇ.8ರ ಗುರುವಾರ





ಕಂಕಣಧಾರಣೆಯೊಂದಿಗೆ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳು ಆರಂಭವಾಗಲಿವೆ, ಮೇ.9ರ ಶುಕ್ರವಾರ ರಥಕ್ಕೆ ಕಳಸಸ್ಥಾಪನೆ, ಮೇ.10ರ ಶನಿವಾರ ರಥಕ್ಕೆ ತೈಲಾಭಿಷೇ, ಶ್ರೀವೀರಭದ್ರಸ್ವಾಮಿ ವಿಶೇಷ ಪೂಜೆ, ಅಲಂಕಾರಗಳನ್ನು ನೆರವೇರಿಸಲಾಗುವುದು. ಮೇ.11ರ ಭಾನುವಾರ ಬೆಳಗಿನ ಜಾವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಪುರಂತರ ವೀರನಾಟ್ಯದೊಂದಿಗೆ ಅಗ್ನಿಕುಂಡ ಕಾರ್ಯಕ್ರಮವಿರುತ್ತದೆ. ಮೇ.12ರ ಸೋಮವಾರ ಶ್ರೀವೀರಭದ್ರಸ್ವಾಮಿ ದೊಡ್ಡರಥೋತ್ಸವ, ಅಡ್ಡಪಲ್ಲಕ್ಕಿ ಉತ್ಸವ, ಪುರಂತವೀರನಾಟ್ಯ, ಮುಕ್ತಿಬಾವುಟ ಹರಾಜು, ಮೇ.13ರ ಮಂಗಳವಾರ ಕಡುಬಿನ ಕಾಳಗ, ಮೇ.14ಬುಧವಾರ ಕಂಕಣವಿಸರ್ಜನೆಯೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯಗೊಳ್ಳುವುದು.

ಮೇ.17ರ ಶನಿವಾರ ಸೂಜಿಮಲ್ಲೇಶ್ವರ ನಗರದಲ್ಲಿ ದನಗಳ ಜಾತ್ರೆಯನ್ನು ಹಮ್ಮಿಕೊಂಡಿದ್ದು ಉತ್ತಮ ರಾಸುಗಳಿಗೆ ಬಹುಮಾನ ವಿತರಣೆ ಮಾಡಲಾಗುವುದು. ಶ್ರೀಸ್ವಾಮಿಯ ಜಾತ್ರೆಯನ್ನುಯಶಸ್ವಿಗೊಳಿಸಿ, ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ಆಡಳಿತಮಂಡಳಿ ಮನವಿ ಮಾಡಿದೆ.

---

**ಫಾಸ್ಟ್ ನ್ಯೂಸ್**

## ನೆಹರು ಯುವ ಕೇಂದ್ರ ಯುವ ಜನ ಅಧಿಕಾರಿಗೆ ಬೀಳ್ಕೊಡುಗೆ ಸಮಾರಂಭ




» **ಚಿತ್ರದುರ್ಗ**

ನೆಹರು ಯುವ ಕೇಂದ್ರದ ಯುವಜನ ಅಧಿಕಾರಿಗಳಾದ ಎನ್. ಸುಹಾಸ್ ಇವರು ಕೇರಳದ ತಿರುವನಂತಪುರಂ ಜಿಲ್ಲೆಗೆ ವರ್ಗಾವಣೆಯಾದ ಪ್ರಯುಕ್ತ ಈ ದಿನ ಅವರಿಗೆ ವಿವಿಧ ಸಂಯುಕ್ತ ಆಶ್ರಯದ ಮೂಲಕ ಬಿಳ್ಕೊಡುಗೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿಗಳಾದ ಮಜಹರ್ ಉಲ್ಲಾ ಮಾತನಾಡಿ ಚಿತ್ರದುರ್ಗ ಜಿಲ್ಲೆಯಲ್ಲಿ ಕಳೆದ ಐದು ವರ್ಷ ಒಂಬತ್ತು ತಿಂಗಳು ನೆಹರು ಯುವ ಕೇಂದ್ರದ ಯುವ ಜನ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿದ ಶ್ರೀ ಎನ್. ಸುಹಾಸ್ ಇವರು ಅತ್ಯಂತ ಪ್ರಾಮಾಣಿಕ ಹಾಗೂ ಯುವಜನರಲ್ಲಿ ಅರಿವು ಮೂಡಿಸುವ ವಿವಿಧ ಬಗೆಯ ಕಾರ್ಯಕ್ರಮಗಳನ್ನು ಆಯೋಜಿಸಿ ಯುವ ಜನರಲ್ಲಿ ದುಶ್ಚಟಗಳಿಂದ ದೂರವಿರುವ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಸೇರಿದಂತೆ ವಿವಿಧ ಸ್ವಚ್ಛತಾ ಕಾರ್ಯಕ್ರಮದಲ್ಲಿ ಮುಂದಾಳತ್ವ ಅನ್ವಯಿಸಿ ಸಮರ್ಪಕವಾಗಿ ನಿರ್ವಹಿಸುತ್ತಿದ್ದ ದಕ್ಷ ಅಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಾರೆ ಎಂದು ತಿಳಿಸಿದರು. ಎನ್ ಎಸ್ ಎಸ್ ಅಧಿಕಾರಿಗಳಾದ ಡಾ. ಪ್ರಸಾದ್ ಇವರು ಮಾತನಾಡಿ ಜಿಲ್ಲೆಗೆ ಶ್ರೀ ಸುಹಾಸ್ ಅವರ ಕಾರ್ಯವೈಕರಿ ಶ್ಲಾಘನಿಯ ವಾಗಿರುತ್ತದೆ ಎಂದು ತಿಳಿಸಿದರು.ನೂತನಾಗಿ ಅಧಿಕಾರ ವಹಿಸಿಕೊಂಡಿರುವ ಸಂಜೀವ್ ಬುಕ್ಯಾ ಇವರು ಮಾತನಾಡಿ ಸುಹಾಸ್ ಅವರ ಸೇವಾ ಅವಧಿಯಲ್ಲಿ ನಿರ್ವಹಿಸಿದ ಕಾರ್ಯಕ್ರಮಗಳನ್ನು ಶ್ಲಾಘನೆ ವ್ಯಕ್ತಪಡಿಸಿ ಮುಂದೆಯೂ ಹೀಗೆಯೇ ಸಹಕಾರ ನೀಡುವಂತೆ ಎಲ್ಲರಲ್ಲೂ ವಿಜ್ಞಾಪಿಸಿಕೊಂಡಿದ್ದರು. ಈ ಸಂದರ್ಭದಲ್ಲಿ ನೆಹರು ಯುವ ಕೇಂದ್ರ ದ ಲೆಕ್ಕಧಿಕಾರಿ ರಮೇಶ್, ಬಹು ಕಾರ್ಯ ಸಿಬ್ಬಂದಿ ಭರತ್,ಶ್ರೀಮತಿ ಅನ್ನಪೂರ್ಣ, ಅಮೃತ ನರ್ಸಿಂಗ್ ಕಾಲೇಜು ಪ್ರಾಂಶುಪಾಲ ವಜಾಹತ್ ಉಲ್ಲಾ,ಗೋಪಾಲ ಸ್ವಾಮಿ ನಾಯಕ, ಶ್ರೀನಿವಾಸ್ ಮಳಲಿ, ಮಡಿಲು ಸಂಘದ ಅಧ್ಯಕ್ಷ ಕುಮಾರ ಸ್ವಾಮಿ,ಎಸ್ ಬಾಬು, ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸೇರಿದಂತೆ ಹಲವಾರು ಜನರು ಉಪಸ್ಥಿತರಿದ್ದರು.

## ಬಿಂದುಮಾಧವ ಶರ್ಮಾ ಸ್ವಾಮೀಜಿ ಜಯಂತಿ

» **ಹೊಸದುರ್ಗ**

ತಾಲ್ಲೂಕಿನ ಶ್ರೀರಾಂಪುರ ಹೋಬಳಿಯ ಬೆಲಗೂರು ಗ್ರಾಮದಲ್ಲಿನ ವೀರಪ್ರತಾಪ ಆಂಜನೇಯ ಸ್ವಾಮಿ ಸನ್ನಿಧಿಯಲ್ಲಿ ಅವಧೂತ ಬಿಂದುಮಾಧವ ಶರ್ಮಾ ಸ್ವಾಮೀಜಿ ಅವರ 79ನೇ ಜಯಂತಿ ಮಹೋತ್ಸವ ಬುಧವಾರ ಧಾರ್ಮಿಕ ವಿಧಿಗಳನ್ವಯಗಳ ಪ್ರಕಾರ ಶ್ರೀ ವಿಜಯ ಮಾರುತಿ ಶರ್ಮಾ ಸ್ವಾಮೀಜಿ ಅವರ ನೇತೃತ್ವದಲ್ಲಿ ಅತ್ಯಂತ ವಿಜೃಂಭಣೆಯಿಂದ ಅರ್ಥಪೂರ್ಣವಾಗಿ ನಡೆಯಿತು. ಜಯಂತಿ ಮಹೋತ್ಸವ ಅಂಗವಾಗಿ ಬುಧವಾರ ಬೆಳಿಗ್ಗೆ ಮದ್ವಾಲ್ಮೀಕಿ ರಾಮಾಯಣ ಪಾರಾಯಣ, ಚಂಡಿಕಾ ಹೋಮ, ರುದ್ರ ಹೋಮ, ಬಿಂದು ಮಾಧವ ಶರ್ಮಾ ಸ್ವಾಮೀಜಿ ಪ್ರತಿಮೆ ಹೊತ್ತು ಅಡ್ಡಪಲ್ಲಕ್ಕಿ ಉತ್ಸವ, ಷೋಡಶೋಪಚಾರ ಪೂಜೆ ಸೇರಿದಂತೆ ಹಲವು ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಏ 16 ರಿಂದ ಏ. 30 ವರೆಗೂ ನಿತ್ಯ ಒಂದೊಂದು ಧಾರ್ಮಿಕ ಹಾಗೂ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನುಆಯೋಜಿಸಲಾಗಿತ್ತು.ಪ್ರತಿದಿನ ನೂರಾರು ಭಕ್ತರು ಆಗಮಿಸಿ, ಅವಧೂತ ಪೂಜಾ ಕಾರ್ಯಗಳಲ್ಲಿ ತೊಡಗಿಕೊಂಡಿದ್ದರು. ಬಂದ ಭಕ್ತರಿಗೆ ನಿತ್ಯ ಮತ್ತು ನಿರಂತರ ಅನ್ನದಾಸೋಹ ನಡೆಯಿತು ರಾಜ್ಯದ ನಾನ ಕಡೆಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು.

## ಮಾಶಾಸನ ಪತ್ರ ವಿತರಣೆ

» **ಹೊಸದುರ್ಗ**

ಶ್ರೀ ಕ್ಷೇತ್ರ ಧರ್ಮಸ್ಥಳದ ಸಂಸ್ಥೆಯ ವತಿಯಿಂದ ತಾಲೂಕಿನ ಬೆಲಗೂರು ವಲಯದ ಕಬ್ಬಳ ಕಾರ್ಯಕ್ಷೇತ್ರದಲ್ಲಿ ಲಕ್ಕಮ್ಮ ರವರಿಗೆ ಮಾಶಾಸನ ಮಂಜೂರು ಆಗಿದ್ದು ಮಂಜುರಾತಿ ಪತ್ರವನ್ನು ಚಿತ್ರದುರ್ಗ,ದಾವಣಗೆರೆ, ಶಿವಮೊಗ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ನಿರ್ದೇಶಕ ಬಿ.ಆರ್ ರವಿಕುಮಾರ್ ವಿತರಿಸಿದರು.

# ಕೆಲಸಕ್ಕೆ ತಕ್ಕಂತೆ ಕಾರ್ಮಿಕರಿಗೆ ವೇತನ ಸಿಗುತ್ತಿಲ್ಲ




» ಚಿತ್ರದುರ್ಗ

ಕಾರ್ಮಿಕರನ್ನು ಸಂಕಷ್ಟಕ್ಕೆ ದೂಡಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ದ ಕಾರ್ಮಿಕರು ಧ್ವನಿಯಾಗಬೇಕೆಂದು ಸಿ.ಪಿ.ಐ. ರಾಜ್ಯ ಕಾರ್ಯದರ್ಶಿ ಕಾಂ.ಸಾತಿ ಸುಂದರೇಶ್ ಕರೆ ನೀಡಿದರು.

ಭಾರತ ಕಮ್ಯುನಿಸ್ಟ್ ಪಕ್ಷ, ಜಿಲ್ಲಾ ಕಾರ್ಮಿಕರ ಸಾಮೂಹಿಕ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಎ.ಐ.ಟಿ.ಯು.ಸಿ. ಕಚೇರಿ ಮುಂಭಾಗ ಗುರುವಾರ ನಡೆದ 48 ವರ್ಷದ ಹುತಾತ್ಮರ ಕಾರ್ಮಿಕರ ಮೇ. ದಿನಾಚರಣೆಯನ್ನು ಗಂಜರ ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

1886 ರಲ್ಲಿ ಅಮೇರಿಕಾದ ಚಿಕಾಗೋದಲ್ಲಿ ಕಾರ್ಮಿಕರು ಎಂಟು ಗಂಟೆ ಕೆಲಸ, 8 ಗಂಟೆ ವಿಶ್ರಾಂತಿ, 8 ಗಂಟೆಗಳ ಕಾಲ ಮನೋರಂಜನೆ ಇರಬೇಕೆಂದು ಹೋರಾಟ ಆರಂಭಿಸಿದಾಗ ಏಳು ಪೊಲೀಸರು, ನಾಲ್ಕು ಮಂದಿ ನಾಗರೀಕರು ಬಲಿಯಾಗುತ್ತಾರೆ. ಕೆಲವು ಕಾರ್ಮಿಕ ಮುಖಂಡರು ಗಲ್ಲಿಗೇರುತ್ತಾರೆ. ಅಂದಿನಿಂದ ಪ್ರತಿ ವರ್ಷವೂ ಕಾರ್ಮಿಕ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಇಂದಿನ ಕಾರ್ಮಿಕರ ಸ್ಥಿತಿಗತಿ ಕುರಿತು ಚರ್ಚಿಸಬೇಕಾಗಿದೆ. ಸರ್ಕಾರ ಮತ್ತು ಸಿರಿವಂತರು ಸೇರಿಕೊಂಡು ಕಾರ್ಮಿಕರನ್ನು ಶೋಷಣೆ ಮಾಡುತ್ತಿರುವುದರ ವಿರುದ್ದ ಕಾರ್ಮಿಕರು ಒಗ್ಗಟ್ಟಾಗಿ ಹೋರಾಟ ಮಾಡಬೇಕಿದೆ ಎಂದು ಹೇಳಿದರು.

ಕೆಲಸಕ್ಕೆ ತಕ್ಕಂತೆ ಕಾರ್ಮಿಕರಿಗೆ ವೇತನ ಸಿಗುತ್ತಿಲ್ಲ. ರಾಜ್ಯದಲ್ಲಿ 27 ಲಕ್ಷ ಕಾರ್ಮಿಕ ಕುಟುಂಗಳಿಗೆ ಸೂರಿಲ್ಲ. ಸರ್ಕಾರ ಜಾತಿ ಗಣತಿಯೊಂದೆ ನಡೆಸಬಾರದು. ಶಿಕ್ಷಣ ಮತ್ತು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವವರ ಮಾಹಿತಿ ಪಡೆದು ವರದಿ ಸಿದ್ದಪಡಿಸಬೇಕು. ಶಿಕ್ಷಣ ಖಾಸಗೀಕರಣವಾಗುತ್ತಿರುವುದರಿಂದ ಕಾರ್ಮಿಕರ ಮಕ್ಕಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಭೂಮಿ ಮತ್ತು ವಸತಿಗಾಗಿ ಹೋರಾಟ ಶುರುವಾಗಿದೆ. ದಿನಕ್ಕೆ ಎಂಟು ಗಂಟೆ ಬದಲಿಗೆ ಹನ್ನೆರಡು ಗಂಟೆಗಳ ಕಾಲ ಕೆಲಸ ಮಾಡುವಂತೆ ಕೇಂದ್ರ ಸರ್ಕಾರ ಕಾನೂನು ಜಾರಿಗೆ ತಂದಿರುವುದರ ವಿರುದ್ದ ನಮ್ಮ ಹೋರಾಟ. ಕಾರ್ಮಿಕರು ಮತ್ತು ರೈತರ ಹಿತ ಕಾಪಾಡಬೇಕಾಗಿದೆ ಎಂದರು.

ಎ.ಐ.ಟಿ.ಯು.ಸಿ. ಜಿಲ್ಲಾ ಮಂಡಳಿ ಅಧ್ಯಕ್ಷ ಕಾಂ.ಬಿ.ಬಸವರಾಜ್ ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜಗಳದಿಂದ ಕಾರ್ಮಿಕರು, ಜನಸಾಮಾನ್ಯರು ಬಡವಾಗುತ್ತಿದ್ದಾರೆ. ಕಾರ್ಮಿಕರ ಕಾಯಿದೆಗಳನ್ನು ಸರ್ಕಾರ ತಿದ್ದುಪಡಿ ಮಾಡಿದೆ. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆಯಿಲ್ಲ. ದಿನಕ್ಕೆ ಹನ್ನೆರಡು ಗಂಟೆ ಕೆಲಸ ಎನ್ನುವುದು ಎಷ್ಟು ಸರಿ ಎನ್ನುವ ಬಗ್ಗೆ ಆಲೋಚನೆಯಾಗಬೇಕು. ಸೂರಿಗಾಗಿ ಸಮರ ಆರಂಭವಾಗಿದೆ ಎಂದು ತಿಳಿಸಿದರು.ರೈತ ಮುಖಂಡ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು ಮಾತನಾಡುತ್ತ ರೈತರು, ಕಾರ್ಮಿಕರು ಒಂದಾದಾಗ ಮಾತ್ರ ದೇಶದಲ್ಲಿ ಅಧಿಕಾರ ಹಿಡಿಯಬಹುದು. ಕೇಂದ್ರ ಸರ್ಕಾರ ರೈತ ವಿರೋಧಿ ಕಾಯಿದೆಗಳನ್ನು ಜಾರಿಗೆ ತರುತ್ತಿರುವುದರ ವಿರುದ್ದ ಹೋರಾಟ ನಿರಂತರವಾಗಿರಬೇಕೆಂದು ನುಡಿದರು.

ಎ.ಐ.ಟಿ.ಯು.ಸಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ವಸತಿಗಾಗಿ 1500 ಅರ್ಜಿಗಳು ಬಂದಿವೆ. ಆರು ಪಂಚಾಯಿತಿಗಳಲ್ಲಿ ಪಿ.ಡಿ.ಓ.ಗಳಿಗೆ ಅರ್ಜಿಗಳನ್ನು ಕೊಡಲಾಗಿದೆ. ಪ್ರತಿ ಹಳ್ಳಿಗಳಲ್ಲಿಯೂ ನಿವೇಶನರಹಿತರ ಸರ್ವೆ ನಡೆಸಿ ಪಟ್ಟಿ ಕೊಡುವಂತೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಿಲ್ಲಾ ಪಂಚಾಯಿತಿ ಸಿ.ಇ.ಓ.ಗಳಿಗೆ ಸೂಚಿಸಿರುವುದು ನಮ್ಮ ಹೋರಾಟಕ್ಕೆ ಸಿಕ್ಕ ಪ್ರತಿಫಲ ಎಂದು ಹರ್ಷ ವ್ಯಕ್ತಪಡಿಸಿದರು. ರಾಜೀವ್‌ಗಾಂಧಿ ವಸತಿ ನಿಗಮಗಳಲ್ಲಿ ಅರ್ಜಿಗಳನ್ನು ಕೊಡುಸುತ್ತಿದ್ದೇವೆ. ಕಾರ್ಮಿಕರ ಮಕ್ಕಳಿಗೆ ಶಿಕ್ಷಣ ಕೊಡಿಸುವುದು ನಮ್ಮ ಹೋರಾಟದ ಮುಖ್ಯ ಉದ್ದೇಶ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಚುನಾವಣೆಗಳಲ್ಲಿ ಕಮ್ಯುನಿಸ್ಟ್‌ನ ಪ್ರಾಮಾಣಿಕ ಕಾರ್ಯಕರ್ತರನ್ನು ಕಣಕ್ಕಿಳಿಸಲಾಗುವುದು. ಅಂಗನವಾಡಿ ಕಾರ್ಯಕರ್ತೆಯರು ಚುನಾವಣೆಗೆ ಸಜ್ಜಾಗಬೇಕು. ಹಳ್ಳಿಗಳಲ್ಲಿ ಕಾರ್ಮಿಕರ ಸಂಘಟನೆಗಳ ಹೆಸರಿನಲ್ಲಿ ನಿವೇಶನ ಮನೆ ಕೊಡಿಸುವುದಾಗಿ ಯಾರಾದರೂ ಹಣ ವಸೂಲಿಗೆ ಇಳಿದರೆ ಪೊಲೀಸರಿಗೆ ದೂರು ಕೊಡಲಾಗುವುದೆಂದರು.ಎ.ಐ.ಟಿ. ಯು.ಸಿ. ರಾಜ್ಯ ಉಪಾಧ್ಯಕ್ಷ ಕಾಂ.ಟಿ.ಆರ್. ಉಮಾಪತಿ ಮಾತನಾಡುತ್ತ ಕೇಂದ್ರ ಸರ್ಕಾರ 29 ಕಾಯಿದೆಗಳನ್ನು ರದ್ದುಪಡಿಸಿ ಕೇವಲ ನಾಲ್ಕು ಲೇಬರ್ ಕೋಡ್‌ಗಳನ್ನು ಮಾತ್ರ ಉಳಿಸಿಕೊಂಡಿದೆ. ಕಾರ್ಮಿಕರಿಗೆ ಮಾರಕವಾಗಿರುವ ಈ ಕಾನೂನನ್ನು ಜಾರಿಗೆ ತರಲು ನಾವುಗಳು ಬಿಡುವುದಿಲ್ಲ. ಮುಷ್ಕರದಿಂದ ನ್ಯಾಯಯುತವಾದ ಹಕ್ಕುಗಳನ್ನು ಪಡೆಯುತ್ತೇವೆ. ಮೇ.20 ರಂದು ಅಖಿಲ ಭಾರತ ಮುಷ್ಕರವಿದೆ ಎಂದು ತಿಳಿಸಿದರು. ಎ.ಐ.ಟಿ.ಯು.ಸಿ.ಜಿಲ್ಲಾ ಗೌರವಾಧ್ಯಕ್ಷ ಕಾಂ.ಸಿ.ವೈ.ಶಿವರುದ್ರಪ್ಪ, ಸಿ.ಪಿ.ಐ.ಜಿಲ್ಲಾ ಸಹ ಕಾರ್ಯದರ್ಶಿ ಕಾಂ.ದೊಡ್ಡುಳ್ಳಾರ್ತಿ ಕರಿಯಣ್ಣ, ಜಿಲ್ಲಾ ಸಹ ಕಾರ್ಯದರ್ಶಿ ಕಾಂ.ಬಿ.ಹೆಚ್. ಹನುಮಂತಪ್ಪ, ಕಾಂ.ಭಾಗ್ಯಮ್ಮ, ಕಾಂ. ಜಾಫರ್, ಕಾಂ.ಪರ್ವಿನ್, ಕಾಂ. ಜಯದೇವಮೂರ್ತಿ, ಕಾಂ.ಕುಮಾರಣ್ಣ, ರೈತ ಮುಖಂಡ ಧನಂಜಯ ಹಂಪಯ್ಯನಮಾಳಿಗೆ ಇವರುಗಳು ವೇದಿಕೆಯಲ್ಲಿದ್ದರು.ಎ.ಐ.ಟಿ.ಯು.ಸಿ. ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕಾಂ. ಕೆ.ಇ.ಸತ್ಯಕೀರ್ತಿ ಸೇರಿದಂತೆ ನೂರಾರು ಕಮ್ಯುನಿಸ್ಟ್ ಕಾರ್ಯಕರ್ತರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮೇ. ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.


## ಫಾಸ್ಟ್ ನ್ಯೂಸ್

### ಸಿಎಂ ವರ್ತನೆಗೆ ಖಂಡನೆ

» ಚಿತ್ರದುರ್ಗ

ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಪ್ರತಿಭಟನಾ ಸಮಾವೇಶದಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೆಚ್ಚುವರಿ ರಕ್ಷಣಾಧಿಕಾರಿ ನಾರಾಯಣ ವಿ.ಭರಮನಿಯವರನ್ನು ಹೊಡೆಯಲು ಕೈ ಎತ್ತಿರುವುದನ್ನು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ತೀವ್ರವಾಗಿ ಖಂಡಿಸಿದ್ದಾರೆ. 1994 ರ ಬ್ಯಾಚ್‌ನ ನಾರಾಯಣ ವಿ.ಭರಮನಿ 2007 ರಲ್ಲಿ ಕುಖ್ಯಾತ ರೌಡಿ ಪ್ರವೀಣ್ ಶಿಂತ್ರೆಯನ್ನು ಎನ್‌ಕೌಂಟರ್‌ನಲ್ಲಿ ಫಿನಿಶ್ ಮಾಡಿ ದಿಟ್ಟತನ ಮೆರೆದಿದ್ದರು. ಇಂತಹ ದಕ್ಷ ಅಧಿಕಾರಿಯ ಮೇಲೆ ಸಮಾವೇಶದ ವೇದಿಕೆಯಲ್ಲೇ ಹೊಡೆಯಲು ಕೈಎತ್ತಿರುವುದು ಮುಖ್ಯಮಂತ್ರಿ ಸ್ಥಾನಕ್ಕೆ ಸಭ್ಯತೆಯಲ್ಲ. ಅಧಿಕಾರದ ದರ್ಪದಿಂದ ಮೆರೆಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಸುಮೋಟೋ ಕೇಸು ದಾಖಲಿಸುವಂತೆ ಕೆ.ಟಿ.ಶಿವಕುಮಾರ್ ಒತ್ತಾಯಿಸಿದ್ದಾರೆ.ಈಹಿಂದೆಸಮಾರಂಭವೊಂದರಲ್ಲಿ ಭಾಷಣ ಮಾಡುತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ವೇದಿಕೆಯಲ್ಲಿ ಕುಳಿತಿದ್ದ ಜಿಲ್ಲಾಧಿಕಾರಿಯನ್ನು ವೇದಿಕೆಯಿಂದ ಇಳಿಯುವಂತೆ ಗದರಿಸಿದ್ದರು. ಅಧಿಕಾರಿಗಳನ್ನು ತುಚ್ಚವಾಗಿ ನಡೆಸಿಕೊಳ್ಳುವುದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಶೋಭೆಯಲ್ಲ ಎಂದು ಕೆ.ಟಿ.ಶಿವಕುಮಾರ್ ತಮ್ಮ ಅನಿಸಿಕೆ ವ್ಯಕ್ತಪಡಿಸಿದ್ದಾರೆ.

### ಶಿವಮೊಗ್ಗ ಹಾಲು ಒಕ್ಕೂಟ ಉಪಕಚೇರಿಯಲ್ಲಿ ಬಸವಜಯಂತಿ



» ಚಳ್ಳಕೆರೆ

ಶಿವಮೊಗ್ಗ ಹಾಲುಒಕ್ಕೂಟ ವ್ಯಾಪ್ತಿಯ ನಗರದ ಬೆಂಗಳೂರು ರಸ್ತೆಯಲ್ಲಿರುವ ಉಪಕಚೇರಿ ಕುರಿಯನ್ ಸಭಾಂಗಣದಲ್ಲಿ ಬಸವ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಶಿವಮೊಗ್ಗ ಹಾಲು ಒಕ್ಕೂಟ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಗಜ್ಯೋತಿ ಬಸವಣ್ಣನವರು ಸಮಾಜದ ಪರಿವರ್ತನೆಗಾಗಿ ವಚನಗಳನ್ನು ರಚಿಸಿದರು. ಅವರ ಪ್ರತಿಯೊಂದು ವಚನದಲ್ಲೂ ಎಲ್ಲರೂ ಪರಿವರ್ತನೆಯಾಗುವಂತಹ ಅಂಶಗಳು ಅಡಗಿದ್ದವು. ಇಂದಿಗೂ ಸಹ ಸಮಾಜದಲ್ಲಿ ಅವರ ವಚನಗಳ ಬಗ್ಗೆ ಅಪಾರವಾದ ಗೌರವವಿದೆ. ನಾವೆಲ್ಲರೂ ಅವರ ಆದರ್ಶಗಳನ್ನು ಪಾಲಿಸೋಣವೆಂದರು. ಕಾರ್ಯಕ್ರಮದಲ್ಲಿ ವಿಸ್ತರಣಾಧಿಕಾರಿ ನಯಾಜ್‌ಬೇಗ್, ಮಾರ್ಕೆಂಟಿಗ್ ಅಧಿಕಾರಿ ಇರ್ಫಾನ್, ಮೇಲ್ವಿಚಾರಕ ತನ್ವೀರ್, ಪಶುವೈದ್ಯಾಧಿಕಾರಿ ಡಾ.ನರೇಶ್, ರಂಗನಾಥ, ಸಂತೋಷ್, ಸುರೇಶ್‌ಬಾಬು ಮುಂತಾದವರು ಪಾಲ್ಗೊಂಡಿದ್ದರು.

### ಪದಾಧಿಕಾರಿಗಳ ಆಯ್ಕೆ



» ಹೊಳಲ್ಕೆರೆ

ತಾಲೂಕು ಪತ್ರಿಕೆ ವಿತರಣ ಸಂಘದಕ್ಕೆ ನೆಡೆದ ಪದಾಧಿಕಾರಿಗಳ ಆಯ್ಕೆಯಲ್ಲಿ ನೂತನ ಅಧ್ಯಕ್ಷರಾಗಿ ರವಿಕುಮಾರ್‌ಅವಿರೋದಆಯ್ಕೆಯಾದರು.ಪ್ರಧಾನ ಕಾರ್ಯದರ್ಶಿ ಚೀರನಹಳ್ಳಿಶಂಕರಪ್ಪ, ಕೋಶಾಧ್ಯಕ್ಷ ನಾರಾಯಣಪ್ಪ, ಗೌರವಾಧ್ಯಕ್ಷ ರವಿಮಲ್ಲಾಡಿಹಳ್ಳಿ, ಉಪಾಧ್ಯಕ್ಷರಾಗಿ ರಾಮಗಿರಿತಿಪ್ಪೇಸ್ವಾಮಿ, ಶಿವಪುರಶಿವಕುಮಾರ್, ಕಾರ್ಯದರ್ಶಿ ಮಂಜಣ್ಣ ಚಿಕ್ಕಜಾಜೂರು, ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ್‌ಚಿಕ್ಕಜಾಜೂರು,ಸಹಕಾರ್ಯದರ್ಶಿ ನಿರಂಜನ್, ನಿರ್ದೇಶಕರಾದ ಶಿವಣ್ಣಚಿಕ್ಕಜಾಜೂರು, ರುದ್ರೇಶ್ ಮತ್ತೀತರು ಆಯ್ಕೆಯಾಗಿದ್ದಾರೆ. ವಿತರಕ ಸಂಘದ ಪದಾಧಿಕಾರಿಗಳನ್ನು ತಾಲೂಕು ಪತ್ರಕರ್ತರ ಸಂಘದಿಂದ ಸನ್ಮಾನಿಸಿದರು. ಇದೆ ಸಮಯದಲ್ಲಿ ವಕೀಲರಾದ ಎಸ್.ವೇದಮೂರ್ತಿ, ಎ.ಚಿತ್ತಪ್ಪ, ಹಸನ್ ಸಾಬ್, ಸುರೇಶ್, ನಾಗರಾಜ್, ಮಧು ಮತ್ತಿತರರು ಉಪಸ್ಥಿತರಿದ್ದರು.

### ಜಾತಿಗಣತಿಯಲ್ಲಿ ಛಲವಾದಿ ಎಂದು ನಮೂದಿಸಿ

» ಪರಶುರಾಂಪುರ

ಜಾತಿಜನಗಣತಿಯ ಸಂದರ್ಭ ಪರಿಶಿಷ್ಟ ಜಾತಿಗೆ ಸೇರಿದವರು ಕಲಂ ಸಂಖ್ಯೆ 6ರಲ್ಲಿ ಛಲವಾದಿ ಎಂದುತಪ್ಪದೆ ನಮೂದಿಸ ಬೇಕು ಎಂದುಛಲವಾದಿ ಮಹಾಸಭಾದಜಿಲ್ಲಾಉಪಾಧ್ಯಕ್ಷ ಹಾಗೂ ಗ್ರಾಪಂ ಸದಸ್ಯ ಗೋಸಿಕೆರೆ ಓಂಕಾರಮೂರ್ತಿ ಮನವಿ ಮಾಡಿದ್ದಾರೆ. ಛಲವಾದಿ ಜಗದ್ಗುರು ಪೀಠದ ಬಸವನಾಗಿ ದೇವಾ ಶರಣರು, ಛಲವಾದಿ ಮಹಾಸಭಾದರಾಜ್ಯಅಧ್ಯಕ್ಷೆ ವಾಣಿಶಿವರಾಂ ರವರಆದೇಶದಮೇರೆಗೆಛಲವಾದಿಸಮಾಜದಎಲ್ಲಾ ಬಾಂಧವರಲ್ಲಿ ವಿನಂತಿಸುವುದೇನೆಂದರೆ ಒಳ ಮೀಸಲಾತಿಜಾತಿ ಸಮೀಕ್ಷೆ ಮೇ5 ರಿಂದಆರಂಭವಾಗುತ್ತಿದ್ದ, ಸಮುದಾಯದಎಲ್ಲರೂ ಉಪ ಜಾತಿಕಲಂನಲ್ಲಿಛಲವಾದಿ ಸಮುದಾಯದ ಎಲ್ಲರೂಛಲವಾದಿ ಎಂದು ನಮೂದಿಸಬೇಕು.

## ಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲುವಿಗೆ ಶ್ರಮಿಸೋಣ



» ದಾವಣಗೆರೆ

ಮುಂಬರುವ ಸ್ಥಳೀಯ ಸಂಸ್ಥೆ ಸೇರಿದಂತೆ ಎಲ್ಲಾ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಪ್ರಾಮಾಣಿಕವಾಗಿ ಶ್ರಮಿಸೋಣ. ಭಿನ್ನಮತ, ಭಿನ್ನಾಭಿಪ್ರಾಯ ಬದಿಗೊತ್ತಿ ಯಾರಿಗೆ ಟಿಕೆಟ್ ಸಿಕ್ಕರೂ ಗೆಲುವಿಗೆ ದುಡಿಯೋಣ ಎಂದು ತೆಲಂಗಾಣ ಯುವ ಕಾಂಗ್ರೆಸ್ ಉಸ್ತುವಾರಿ ಸೈಯದ್ ಖಾಲಿದ್ ಅಹ್ಮದ್ ಅವರು ಕರೆ ನೀಡಿದರು.

ಹೈದರಾಬಾದ್‌ನ ಎಲ್‌ಬಿ ನಗರದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಭೆಯಲ್ಲಿ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ತೆಲಂಗಾಣ ಸರ್ಕಾರ ಜನರ ಹಿತ ಕಾಪಾಡುತ್ತಿದೆ. ರಾಜ್ಯದ ಪ್ರತಿಯೊಬ್ಬರಿಗೂ ಸೌಲಭ್ಯ ಕೊಡಿಸುವಲ್ಲಿ ಯತ್ನಿಸುತ್ತಿದೆ. ಆರ್ಥಿಕ ಹೊರೆಯ ನಡುವೆಯೂ ಬಡವರು, ಹಿಂದುಳಿದವರು, ದಲಿತರು ಸೇರಿದಂತೆ ಎಲ್ಲಾ ವರ್ಗದವರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದೆ. ಸರ್ಕಾರ ಸಾಧನೆಗಳು ನಮಗೆ ಶ್ರೀರಕ್ಷೆಯಾಗಲಿದೆ ಎಂದು ಹೇಳಿದರು.

ಮುಂದಿನ ಚುನಾವಣೆಗಳಲ್ಲಿ ಗೆಲ್ಲುವುದು ಅಷ್ಟು ಸುಲಭವಲ್ಲ. ಸರ್ಕಾರದ ಸಾಧನೆಗಳನ್ನು ಪ್ರತಿ ಮನೆ ಮನೆಗೆ ಹೋಗಿ ತಿಳಿಸುವ ಮೂಲಕ ಯುವ ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಗೆ ಮತ ನೀಡುವಂತೆ ಮಾಡಬೇಕು ಎಂದು ಸಲಹೆ ನೀಡಿದರು.

ಕಾಂಗ್ರೆಸ್ ಪಕ್ಷವು ದೇಶಕ್ಕೆ ಅನೇಕ ಕೊಡುಗೆಗಳನ್ನು ನೀಡಿದೆ. ಆರ್ಥಿಕವಾಗಿ ಹಿಂದುಳಿದವರು, ಅಲ್ಪಸಂಖ್ಯಾತರು, ದಲಿತರು, ಸಮಾಜದ ಕಟ್ಟಕಡೆಯ ವ್ಯಕ್ತಿಯ ಬದುಕು ಹಸನಾಗಿಸಲು ಹಲವು ಕಾರ್ಯಕ್ರಮಗಳನ್ನು ನೀಡಿದೆ. ತೆಲಂಗಾಣ ಮತ್ತು ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳನ್ನು ಚುನಾವಣೆ ಪೂರ್ವದಲ್ಲಿ ಘೋಷಿಸಿ, ಈಗ ಜನರ ಆಶಯಕ್ಕೆ ತಕ್ಕಂತೆ ಅಧಿಕಾರ ನಡೆಸುತ್ತಿದ್ದು, ಜನಪರ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸಿ. ಯಾರೇ ಅಭ್ಯರ್ಥಿಯಾದರೂ ನಾನೇ ಅಭ್ಯರ್ಥಿ ಎಂದುಕೊಂಡು ಓಡಾಡಿ. ಜನರ ಮನಸ್ಸು ತಲುಪಿ. ಕಾರ್ಯಕ್ರಮಗಳ ಕುರಿತಂತೆ ಸಮಗ್ರ ಮಾಹಿತಿ ನೀಡಿ ಎಂದು ಯುವ ಕಾರ್ಯಕರ್ತರಿಗೆ ಸಲಹೆ ನೀಡಿದರು.ಶಾಂತಿ, ಸಹಬಾಳ್ವೆ, ತ್ಯಾಗ, ಬಲಿದಾನ, ಜಾತ್ಯಾತೀತತೆ, ದೇಶದ ಸಮಗ್ರತೆ, ಅಭಿವೃದ್ಧಿ ಯಾವಾಗಲೂ ಕಾಂಗ್ರೆಸ್ ಪಕ್ಷದ ಆದ್ಯತೆಯಾಗಿರುತ್ತದೆ. ಪಕ್ಷದ ಕಾರ್ಯಕರ್ತರು ಅಧಿಕಾರದಲ್ಲಿದ್ದೇವೆಂದು ಮೈಮರೆತರೆ ಕಷ್ಟ. ಚುನಾವಣೆ ಮುಗಿಯುವವರೆಗೆ ವಿರಮಿಸದೇ ಕೆಲಸ ಮಾಡಿ. ಸ್ವಲ್ಪ ನಾವು ಮೈಮರೆತರೂ ಗೆಲುವು ಕಷ್ಟವಾಗಲಿದೆ. ರೇವಂತ್ ರೆಡ್ಡಿ ಅವರ ಕೈ ಬಲಪಡಿಸೋಣ. ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ನಾವೂ ನೆರವಾಗೋಣ ಎಂದು ಸೈಯದ್ ಖಾಲಿದ್ ಅಹ್ಮದ್ ಅವರು ಹೇಳಿದರು.

ಸಭೆಯ ಆರಂಭದಲ್ಲಿ ಪಹಲ್ಗಾಮ್ ದಾಳಿಯಲ್ಲಿ ಉಗ್ರರ ಗುಂಡಿಗೆ ಬಲಿಯಾದವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಒಂದು ನಿಮಿಷ ಮೌನಾಚರಣೆ ನಡೆಸಲಾಯಿತು. ಮೃತರ ಕುಟುಂಬದವರಿಗೆ ನೋವು ಭರಿಸುವಂಥ ಶಕ್ತಿ ನೀಡಲಿ ಎಂದು ಪ್ರಾರ್ಥಿಸಲಾಯಿತು.

ಯುವ ಕಾಂಗ್ರೆಸ್ ರಾಷ್ಟ್ರಾಧ್ಯಕ್ಷ ಉದಯ್ ಭಾನು, ಉಸ್ತುವಾರಿ ಕೃಷ್ಣ ಅಲ್ಲಾವರು, ಪೊನ್ನಂ ಪ್ರಭಾಕರ್, ತೆಲಂಗಾಣ ಕಾಂಗ್ರೆಸ್ ಸರ್ಕಾರದ ಸಚಿವರು, ರಾಜ್ಯಾಧ್ಯಕ್ಷ ಶಿವ ಚರಣ್ ಜಕ್ಕಿಡಿ ಮತ್ತಿತರರು ಹಾಜರಿದ್ದರು.

## ಕಟ್ಟಡ ಕಾರ್ಮಿಕರ ಫೆಡರೇಷನ್ ಕಚೇರಿಯಲ್ಲಿ ಮೇ. ದಿನಾಚರಣೆ



» ಚಿತ್ರದುರ್ಗ

ನಗರದ ಪ್ರಸನ್ನ ಟಾಕೀಸ್ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಕಚೇರಿಯಲ್ಲಿ ಸಿ.ಐ.ಟಿ.ಯು. ವತಿಯಿಂದ ಗುರುವಾರ ಕಾರ್ಮಿಕರ ದಿನಾಚರಣೆ ಆಚರಿಸಲಾಯಿತು.ಸಿ.ಐ.ಟಿ.ಯು. ಜಿಲ್ಲಾ ಸಂಚಾಲಕ ಸಿ.ಕೆ.ಗೌಸ್‌ಪೀರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ ಅಮೇರಿಕಾದ ಚಿಕಾಗೋ ನಗರದಲ್ಲಿ ಕಾರ್ಮಿಕರು ತಮ್ಮ ಹಕ್ಕುಗಳಿಗಾಗಿ ಹೋರಾಟ ನಡೆಸಿದ ಸಂದರ್ಭದಲ್ಲಿ ಪೊಲೀಸರು ಗುಂಡು ಹಾರಿಸಿದ ಪರಿಣಾಮ ಅನೇಕ ಕಾರ್ಮಿಕರು ಬಲಿಯಾದರು. ಹುತಾತ್ಮ ಕಾರ್ಮಿಕರ ಸ್ಮರಣಾರ್ಥವಾಗಿ ಪ್ರತಿ ತಿಂಗಳು ಮೇ.1ರಂದು ಕಾರ್ಮಿಕ ದಿನಾಚರಣೆ ಆಚರಿಸಲಾಗುವುದು. ದಿನಕ್ಕೆ ಎಂಟು ಗಂಟೆ ಕೆಲಸ, 8 ಗಂಟೆ ವಿಶ್ರಾಂತಿ, ಎಂಟು ಗಂಟೆಗಳ ಕಾಲ ಮನರಂಜನೆಗಾಗಿ ಕಾರ್ಮಿಕರು ಚಿಕಾಗೋದಲ್ಲಿ ಬೀದಿಗಿಳಿದು ದೊಡ್ಡ ಹೋರಾಟ ನಡೆಸಿದ ಸಂದರ್ಭದಲ್ಲಿ ಅನೇಕರು ಪ್ರಾಣ ತ್ಯಾಗ ಮಾಡಿದ್ದರ ಪರಿಣಾಮವಾಗಿ ವಿಶ್ವದಲ್ಲಿಯೇ ಕಾರ್ಮಿಕರ ದಿನಾಚರಣೆಯನ್ನ ಆಚರಿಸಿ ಹುತಾತ್ಮ ಕಾರ್ಮಿಕರಿಗೆ ಗೌರವ ಸಲ್ಲಿಸಲಾಗುವುದೆಂದರು.ಚಿತ್ರದುರ್ಗ ಜಿಲ್ಲೆಯಲ್ಲಿ ಮೇ.1 ರಂದು ಕಾರ್ಮಿಕರು ಯಾವುದೆ ಕಾರಣಕ್ಕೂ ಕೆಲಸ ಮಾಡಬಾರದು ಕಡ್ಡಾಯವಾಗಿ ರಜೆ ಘೋಷಿಸುವಂತೆ ಕಾರ್ಮಿಕ ಅಧಿಕಾರಿಗೆ ಮನವಿ ಸಲ್ಲಿಸಿದ್ದೆ. ಆದರೂ ಅಧಿಕಾರಿ ಕಾರ್ಮಿಕರ ಬಗ್ಗೆ ಅಸಡ್ಡೆ ತೋರಿದ್ದಾರೆ. ಇಂತಹ ಅಧಿಕಾರಿ ನಮ್ಮ ಜಿಲ್ಲೆಯಲ್ಲಿ ಇರುವುದು ಬೇಡ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯಪ್ರಧಾನಿ ನರೇಂದ್ರಮೋದಿರವರು ಮೇ.1 ರಂದು ಕಾರ್ಮಿಕರಿಂದ ಯಾರು ದುಡಿಸಿಕೊಳ್ಳಬಾರದೆಂದು ಆದೇಶ ಹೊರಡಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು. ರಂಗಸ್ವಾಮಿ, ಗಂಗಾಧರ್, ಮುಬಾರಕ್, ಮಲ್ಲಿಕಾರ್ಜುನ್, ಬಾಬು, ಶೇಖ್‌ಫರೀದ್, ನಾಗರಾಜ್, ದೇವರಾಜ್ ಕಾರ್ಮಿಕ ದಿನಾಚರಣೆಯಲ್ಲಿ ಭಾಗವಹಿಸಿದ್ದರು.

### ವಯಸ್ಸಿನ ಮಿತಿ ಸಡಿಲ ಇಲ್ಲ: ಸರ್ಕಾರದಿಂದ ಸ್ಪಷ್ಟನೆ

ಬೆಂಗಳೂರು: 2025-26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅನ್ವಯ ಆಗುವಂತೆ ಒಂದನೇ ತರಗತಿಗೆ ಮಾತ್ರ ದಾಖಲಾತಿ ವಯಸ್ಸಿನ ಮಿತಿ ಸಡಿಲ ಮಾಡಲಾಗಿದೆ. ಎಲ್‌ಕೆಜಿ-ಯುಕೆಜಿಗೆ ವಯಸ್ಸಿನ ಮಿತಿ ಸಡಿಲ ಇಲ್ಲ ಎಂದು ಸರ್ಕಾರ ಸ್ಪಷ್ಟವಾಗಿ ಆದೇಶ ಹೊರಡಿಸಿದೆ. ಇತ್ತೀಚಿಗೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಒಂದನೇ ತರಗತಿ ದಾಖಲಾತಿ ಮಿತಿಯನ್ನು 5 ವರ್ಷ 5 ತಿಂಗಳಿಗೆ ಕಡಿತ ಮಾಡಿ ಆದೇಶ ಮಾಡಿದ್ದರು. ಈ ಆದೇಶ ಎಲ್‌ಕೆಜಿ-ಯುಕೆಜಿ ಮಕ್ಕಳ ದಾಖಲಾತಿಗೆ ಗೊಂದಲ ಉಂಟು ಮಾಡಿಸಿತ್ತು.

**ಪ್ರಮುಖ ಸುದ್ದಿ**

# ಜಾತಿಗಣತಿಗೆ ಸರ್ಕಾರ ಮುಂದಾಗಬೇಕು: ಇಮ್ಮಡಿ ಶ್ರೀ

» ಚಿತ್ರದುರ್ಗ

ರಾಜ್ಯ ಸರ್ಕಾರ ಒಳ ಮೀಸಲಾತಿಯನ್ನು ಜಾರಿ ಮಾಡುವ ನಿಟ್ಟಿನಲ್ಲಿ ದತ್ತಾಂಶ ಸರಿಯಿಲ್ಲ ಹಿನ್ನಲೆಯಲ್ಲಿ ಈಗ ಜಾತಿ ಗಣತಿಯನ್ನು ನಡೆಸಲು ಮುಂದಾಗಿದೆ ಆದರೆ ಇದರಲ್ಲಿ ಭೋವಿ ಸಮುದಾಯಕ್ಕೆ ಸಂಬಂಧಪಟ್ಟಂತೆ ಕುಲ ಕಸುಭುಗಳನ್ನು ಸರಿಯಾದ ರೀತಿಯಲ್ಲಿ ನಮೂದು ಮಾಡಿಲ್ಲ ಇದನ್ನು ಸರಿಪಡಿಸಿ ಜಾತಿಗಣತಿಗೆ ಸರ್ಕಾರ ಮುಂದಾಗಬೇಕು ಇಲ್ಲವಾದರೆ ನ್ಯಾಯಾಲಯದ ಮೊರೆ ಹೋಗುವುದಾಗಿ ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಸರ್ಕಾರಕ್ಕೆ ಎಚ್ಚರಿಕೆಯನ್ನು ನೀಡಿದ್ದಾರೆ.




ಚಿತ್ರದುರ್ಗ ನಗರದ ಭೋವಿ ಗುರುಪೀಠದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಉಚ್ ನ್ಯಾಯಾಲಯ ಒಳ ಮೀಸಲಾತಿಯನ್ನು ಜಾರಿ ಮಾಡಲು ಆಯಾ ರಾಜ್ಯ ಸರ್ಕಾರಗಳಿಗೆ ಅಧಿಕಾರವನ್ನು ನೀಡಿದೆ ಆದರೆ ಇದನ್ನು ಜಾರಿ ಮಾಡಲು ಸರಿಯಾದ ದತ್ತಾಂಶವನ್ನು ಹೊಂದಿರಬೇಕು ಎಂದು ಸೂಚನೆಯನ್ನು ನೀಡಿದೆ ಇದರ ಅನ್ವಯ ಸರ್ಕಾರ ಈಗ ಜಾತಿ ಗಣತಿಯನ್ನು ಮಾಡಲು ಮುಂದಾಗಿದೆ ಆದರೆ ನಮ್ಮ ಭೋವಿ ಸಮುದಾಯಕ್ಕೆ ಸಂಬಂಧಪಟ್ಟಂತೆ ಕೇವಲ ಮೂರು ಕುಲ ಕಸಬುಗಳನ್ನು ಮಾತ್ರವೇ ನಮೂದು ಮಾಡಲಾಗಿದೆ ಆದರೆ ನಮ್ಮಲ್ಲಿ ಕಲ್ಲು ಒಡೆಯುವವರು, ಕೆರೆಗಳನ್ನು ಕಟ್ಟುವವರು, ಕಟ್ಟಡವನ್ನು ನಿರ್ಮಾಣ ಮಾಡುವವರು, ಭಾವಿಗಳನ್ನು ನಿರ್ಮಾಣ ಮಾಡುವವರು ಈ ರೀತಿಯಾಗಿ ವಿವಿಧ ಕಸಬುಗಳನ್ನು ಮಾಡುವವರು ಇದ್ದಾರೆ ಆದರೆ ಜಾತಿಗಣತಿಯಲ್ಲಿ ಇದಾವುದನ್ನು ನಮೂದು ಮಾಡಿಲ್ಲ ಎಂದು ಆರೋಪಿಸಿದರು.

ಸರ್ಕಾರ ಜಾತಿಗಣತಿಯನ್ನು ಕೇವಲ ಒಂದು ಜಾತಿಗೆ ಮಾತ್ರ ಮಾಡುವುದಾದರೇ ಇದನ್ನು ಮುಂದುವರೆಸಬಹುದು ಆದರೆ ಪರಿಶಿಷ್ಟ ಜಾತಿಯಲ್ಲಿನಜ 101 ಜಾತಿಗಳ ಸಮೀಕ್ಷೆಯನ್ನು ಮಾಡುವುದಾದರೆ ನಮ್ಮ ಭೋವಿ ಸಮುದಾಯಕ್ಕೆ ಸಂಬಂಧಪಟ್ಟಂತೆ ಸರ್ಕಾರದಲ್ಲಿ ಆಗಿರುವ ತಪ್ಪನ್ನು ಸರಿಪಡಿಸಿ ಜಾತಿ ಗಣತಿಯನ್ನು ನಡೆಸಬೇಕಿದೆ.

ಇಲ್ಲವಾದಲ್ಲಿ ಭೋವಿ ಸಮಾಜಕ್ಕೆ ಅನ್ಯಾಯವಾಗುತ್ತದೆ, ಮುಂದಿನ ದಿನದಲ್ಲಿ ಸರ್ಕಾರ ಯಾವುದಾದರೂ ಯೋಜನೆಗಳನ್ನು ರೂಪಿಸಬೇಕಾದರೆ ಈ ದತ್ತಾಂಶ ಅಗತ್ಯವಾಗಿದೆ ಈ ಹಿನ್ನಲೆಯಲ್ಲಿ ಸರಿಯಾದ ರೀತಿಯಲ್ಲಿ ಜಾತಿಗಣತಿಯನ್ನು ಮಾಡಬೇಕಿದೆ ಎಂದು ಸರ್ಕಾರವನ್ನು ಆಗ್ರಹಿಸಿದ ಶ್ರೀಗಳು, ಸರ್ಕಾರ ನಮ್ಮ ಮನವಿಯನ್ನು ಪರಿಗಣಿಸದೇ ಜಾತಿಗಣತಿಯನ್ನು ಪ್ರಾರಂಭ ಮಾಡಿದರೆ ಇದರ ವಿರುದ್ದ ನಾವುಗಳು ನ್ಯಾಯಕ್ಕಾಗಿ ನ್ಯಾಯಾಲಯದ ಮೊರೆ ಹೋಗಬೇಕಾಗುತ್ತದೆ, ಇದಕ್ಕೆ ಸರ್ಕಾರ ಅವಕಾಶವನ್ನು ನೀಡದೆ ಅಗಿರುವ ತಪ್ಪನ್ನು ಸರಿಪಡಿಸಿ ಇದರ ಬಗ್ಗೆ ಜಾತಿಗಣತಿದಾರರಿಗೆ ಸರಿಯಾದ ಮಾಹಿತಿಯನ್ನು ಸೂಕ್ತವಾದ ರೀತಿಯಲ್ಲಿ ಜಾತಿಗಣತಿಯನ್ನು ಮಾಡಿಸುವಂತೆ ಸರ್ಕಾರವನ್ನು ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಒತ್ತಾಯಿಸಿದರು.

## ಕಾರ್ಮಿಕರು ದೈಹಿಕ ಮತ್ತು ಮಾನಸಿಕ ಶಕ್ತಿಯಾಗಿ ಹೊರಹೊಮ್ಮಬೇಕು



» **ಹೊಳಲ್ಕೆರೆ**

ಆಧ್ಯಾತ್ಮಿಕ ಶಕ್ತಿಯಿಂದ ಕಾರ್ಮಿಕರು ದೈಹಿಕ ಮತ್ತು ಮಾನಸಿಕ ಶಕ್ತಿಯಾಗಿ ಹೊರಹೊಮ್ಮಬೇಕು ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾನಿಲಯದ ಸಂಚಾಲಕಿ ಬಿ.ಕೆ.ಸುಮಿತ್ರ ತಿಳಿಸಿದರು.

ಹೊಳಲ್ಕೆರೆ ಪತ್ರಕರ್ತರ ಭವನದಲ್ಲಿ ಪತ್ರಕರ್ತರ ಸಂಘ, ಪತ್ರಿಕೆ ವಿತರಕರ ಸಂಘ ಹಮ್ಮಿಕೊಂಡಿದ್ದ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಾರ್ಮಿಕ ಸಮುದಾಯ ಸಾಕಷ್ಟು ಸಮಸ್ಯೆಗಳ ಮಧ್ಯೆ ಬದುಕು ಕಟ್ಟಿಕೊಳ್ಳುತ್ತಿದ್ದರೂ, ಆಧ್ಯಾತ್ಮಿಕ ಮನಸ್ಥಿತಿಯಿಂದ ಸಮಸ್ಯೆಗಳಿಗೆ ಮುಕ್ತಿ ಕಂಡುಕೊಳ್ಳಬಹುದು. ಬದುಕು ಬವಣೆ ಜೊತೆ ಆಧ್ಯಾತ್ಮಿಕ ಚಿಂತನೆ ನಮ್ಮನ್ನ ಇನ್ನಷ್ಟು ಶಕ್ತಿಶಾಲಿ ವ್ಯಕ್ತಿಗಳನ್ನಾಗಿ ಪರಿವರ್ತಿಸುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಮಾನಸಿಕವಾಗಿ ಸದೃಢತೆ ಕಂಡುಕೊಳ್ಳಲು ಆಧ್ಯಾತ್ಮಿಕ ಶಕ್ತಿಯನ್ನು ಸದ್ಬಳಕೆ ಮಾಡಿಕೊಳ್ಳಲು ಕರೆ ನೀಡಿದರು.

ವಕೀಲ ಎಸ್.ವೇದಮೂರ್ತಿ ಮಾತನಾಡಿ, ದೇಶದಲ್ಲಿ ಕಾರ್ಮಿಕರಾಗಿ ವೃತ್ತಿ ನಿರ್ವಹಿಸುತ್ತಿರುವ ಸಮುದಾಯಕ್ಕೆ ಸಂವಿಧಾನಬದ್ಧ ಹಕ್ಕು ಮತ್ತು ಸೌಲಭ್ಯಗಳಿದ್ದು ಸದ್ಬಳಕೆ ಮಾಡಿಕೊಂಡು ಆರ್ಥಿಕ ಸಬಲೀಕರಣ ಹೊಂದಬೇಕು. ಸರ್ಕಾರ ಕಾರ್ಮಿಕ ಸಮುದಾಯಕ್ಕೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದ್ದರೂ ಕೆಳಮಟ್ಟದಲ್ಲಿ ಕಾರ್ಮಿಕರಿಗೆ ಸರಿಯಾಗಿ ತಲುಪುತ್ತಿಲ್ಲ. ಕಾರ್ಮಿಕರನ್ನು ಕಾರ್ಮಿಕ ಇಲಾಖೆ ಅಧಿಕಾರಿಗಳು ನಿರ್ಲಕ್ಷಿಸುತ್ತಿದ್ದಾರೆ. ಸರ್ಕಾರಿ ಸೌಲಭ್ಯಕ್ಕೆ ಕಚೇರಿಗಳಿಗೆ ಅಲೆದಾಡಿಸುತ್ತಿದ್ದಾರೆ. ಇಲಾಖೆಯಲ್ಲಿ ಭ್ರಷ್ಟಾಚಾರ ಹೆಚ್ಚಾಗಿ ಸಕಾಲದಲ್ಲಿ ಕಾರ್ಮಿಕರಿಗೆ ಸಿಕ್ಕಬೇಕಾದ ಸೌಲಭ್ಯಗಳು ಸಿಕ್ಕುತ್ತಿಲ್ಲ ಎನ್ನುವ ಅರೋಪ ಕೇಳಿ ಬರುತ್ತಿದೆ. ಸರ್ಕಾರ ಈ ನಿಟ್ಟಿನಲ್ಲಿ ಪಾರದರ್ಶಕವಾದ ಆಡಳಿತ ಜಾರಿಗೆ ತರಬೇಕು. ಸರ್ಕಾರದ ಎಲ್ಲಾ ಸೌಲಭ್ಯ ಕಾರ್ಮಿರಿಗೆ ಸರಳವಾಗಿ ಸಿಕ್ಕುವಂತೆ ಮಾಡಬೇಕು ಎಂದು ತಿಳಿಸಿದರು.

ಕಾರ್ಮಿಕರಿಗೆ ಕಾನೂನು ಬದ್ಧವಾದ ಬೆಂಬಲವಿದೆ. ಕಾರ್ಮಿಕರು ಕರ್ತವ್ಯ ನಿರ್ವಹಿಸುವ ಸಮಯದಲ್ಲಿ ಅಪಘಾತವಾದಲ್ಲಿ ಆರೋಗ್ಯ ಸೌಲಭ್ಯ, ಮಕ್ಕಳಿಗೆ ವಿದ್ಯಾಭ್ಯಾಸ ಸೌಲಭ್ಯ, ವಿವಾಹಕ್ಕೆ ಸಹಾಯಧನ, ಗೃಹ ನಿರ್ಮಾಣಕ್ಕೆ ಪ್ರೋತ್ಸಾಹ ಧನ, ಇನ್ನು ಹತ್ತು ಹಲವು ಯೋಜನೆಗಳು ಇದ್ದರೂ ಅವುಗಳು ಕಾರ್ಮಿಕರಿಗೆ ಸಿಕ್ಕುತ್ತಿಲ್ಲ. ಸಾಕಷ್ಟು ಜನರು ಸರ್ಕಾರಿ ಸೌಲಭ್ಯವನ್ನು ಪಡೆದುಕೊಳ್ಳದೆ ಆರ್ಥಿಕ ದುರ್ಬಲಾಗುತ್ತಿದ್ದಾರೆ. ಹಾಗಾಗಿ ಪ್ರತಿಯೊಬ್ಬರೂ ಸರ್ಕಾರಿ ಸೌಲಭ್ಯವನ್ನು ಪಡೆದು ಆರ್ಥಿಕ ಪ್ರಗತಿ ಜೊತೆ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ತಿಳಿಸಿದರು.

ಹೊಳಲ್ಕೆರೆ ಪುರಸಭೆಯ ಉಪಾಧ್ಯಕ್ಷೆ ಹೆಚ್.ಅರ್.ನಾಗರತ್ನ ವೇದಮೂರ್ತಿ ಮಾತನಾಡಿ, ವಿಶ್ವದಾದ್ಯಂತ ಕಾರ್ಮಿಕರನ್ನು ಸಂರಕ್ಷಣೆ ಮಾಡುವ ಉದ್ದೇಶದಿಂದ ಕಾರ್ಮಿಕ ದಿನಾಚರಣೆಯನ್ನು ಕೈಗೊಂಡು ಅವರಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಕೊಡುವ ಚಿಂತನ ಜೊತೆ ಒಂದು ದಿನ ಅವರದೇ ಆದ ದಿನಾಚರಣೆಯನ್ನ ಕೈಗೊಳ್ಳಲು ಅವಕಾಶ ಸಿಕ್ಕಿದೆ. ಕಾರ್ಮಿಕರು ನಿತ್ಯ ನಿರಂತರವಾಗಿ ಸಮಾಜದ ಕೆಲಸವನ್ನ ಮಾಡುತ್ತಿದ್ದರೂ ಜೀವನಕ್ಕೆ ಬೇಕಾದಷ್ಟು ಕೆಲಸ ಕೂಲಿ ಸಿಕ್ಕುತ್ತಿಲ್ಲ. ಅವರಿಗೆ ಸರ್ಕಾರದ ಸೌಲಭ್ಯಗಳು ಸಿಕ್ಕಬೇಕಾಗಿದೆ. ಪ್ರಮುಖವಾಗಿ ಪೌರಕಾರ್ಮಿಕರು ಪ್ರತಿನಿತ್ಯ ಮುಂಜಾನೆಯಿಂದ ಸಂಜೆತನಕ ಸಾರ್ವಜನಿಕರ ಕೆಲಸವನ್ನು ಪ್ರಾಮಾಣಿಕತನದಿಂದ ನಿರ್ವಹಿಸುತ್ತಿರುತ್ತಿದ್ದಾರೆ. ಕಾರ್ಮಿಕರಿಗೆ ಶಕ್ತಿ ನೀಡಲು ಸರ್ಕಾರ ಸಾಕಷ್ಟು ಯೋಜನೆಗಳನ್ನು ರೂಪಿಸಿ ಕಲ್ಪಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ ಎಂದರು. ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಎ.ಚಿತ್ತಪ್ಪ ಮಾತನಾಡಿ, ಕಾರ್ಮಿಕರು ಕಷ್ಟಪಟ್ಟು ದುಡಿದರು ಸಮರ್ಪಕವಾದ ಕೂಲಿ ಸಿಕ್ಕುತ್ತಿಲ್ಲ. ಗ್ರಾಮೀಣ ಭಾಗದ ಕೂಲಿ ಕಾರ್ಮಿಕರು ಉದ್ಯೋಗವಿಲ್ಲದೆ ನಿರುದ್ಯೋಗವಂತರಾಗಿದ್ದಾರೆ. ಸಾಕಷ್ಟು ಕಾರ್ಮಿಕರು ಜೀವನೋಪಾಯಕ್ಕೆ ಸಾಲ ಸೌಲಭ್ಯ ಮಾಡಿಕೊಂಡು ಆತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣಗಳು ಹೆಚ್ಚುತ್ತಿದ್ದು, ಸರ್ಕಾರ ಕಾರ್ಮಿಕರನ್ನು ರಕ್ಷಣೆ ಮಾಡಲು ಬರಪೂರ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಯೋಜನೆಗಳನ್ನು ರೂಪಿಸಬೇಕು ಎಂದು ತಿಳಿಸಿದರು.ಪತ್ರಕರ್ತರಾದ ಸುರೇಶ್ ಮಾತನಾಡಿ, ಕಾರ್ಮಿಕರು ನಿರಂತರವಾಗಿ ಕಷ್ಟಪಟ್ಟು ಬದುಕು ಕಟ್ಟಿಕೊಳ್ಳುತ್ತಿರುತ್ತಾರೆ. ಅವರ ಆರೋಗ್ಯ ಮಕ್ಕಳ ವಿದ್ಯಾಭ್ಯಾಸಕ್ಕೆ ಸರ್ಕಾರ ಉಚಿತ ಸೌಲಭ್ಯಗಳನ್ನು ನೀಡಬೇಕು ತಿಳಿಸಿದರು.ಪರ್ತಕರ್ತರಾದ ನಾಗರಾಜ್, ಮಧು, ವಿತರಕರ ಸಂಘದ ಅಧ್ಯಕ್ಷ ರವಿಕುಮಾರ್, ಕಾರ್ಯದರ್ಶಿ ಶಂಕರಪ್ಪ, ಕೋಶಾಧ್ಯಕ್ಷ ನಾರಾಯಣಪ್ಪ ,ಗೌರವಾಧ್ಯಕ್ಷ ರವಿ ಮಲ್ಲಾಡಿಹಳ್ಳಿ, ಉಪಾಧ್ಯಕ್ಷರಾದ ತಿಪ್ಪೇಸ್ವಾಮಿ, ಶಿವಪುರ ಶಿವಕುಮಾರ್, ಪ್ರಧಾನ ಕಾರ್ಯದರ್ಶಿ ಮಂಜಣ್ಣ ಚಿಕ್ಕಜಾಜೂರು, ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ್, ಸಹ ಕಾರ್ಯದರ್ಶಿ ನಿರಂಜನ್, ಶಿವಣ್ಣಚಿಕ್ಕಜಾಜೂರು, ರುದ್ರೇಶ್, ಹಸನ್ ಸಾಬ್ ಮತ್ತಿತರರು ಉಪಸ್ಥಿತರಿದ್ದರು.


## ಜಾತಿ ಸಮೀಕ್ಷೆಯಲ್ಲಿ ಮಾದಿಗ ಎಂದೇ ಬರೆಸಿ-ಬಾಬು




» **ಪರಶುರಾಂಪುರ**

ಮೇ.6 ರಿಂದಆರಂಭವಾಗಲಿರುವ ಪರಿಶಿಷ್ಟ ಜಾತಿಗಳಲ್ಲಿನ ಉಪ ಜಾತಿಗಳ ಗಣತಿಗಾಗಿತಮ್ಮ ಮನೆಗಳಿಗೆ ಭೇಟಿ ನೀಡಿದಾಗ 61ರ ಉಪಜಾತಿಕಾಲಂನಲ್ಲಿ ಮಾದಿಗಎಂದೇ ಬೆರೆಸಬೇಕುಎಂದುಗ್ರಾಪಂ ಸದಸ್ಯ ಓಬಳೇಶ್ ತಿಳಿಸಿದರು. ಗ್ರಾಮದ ಎಕೆ ಕಾಲೋನಿಯಲ್ಲಿ ಮಂಗಳವಾರ ದಲಿತ ಸಂಘಟನೆಗಳು ನಡೆಸಿದ ಜಾಗೃತಿಕಾರ್ಯಕ್ರಮದಲ್ಲಿ ಕರಪತ್ರಗಳನ್ನು ವಿತರಿಸಿ ಮಾತನಾಡಿದರು. ಮಾದಿಗ ಸಮುದಾಯ ಸರ್ವೋ9ತೋಮುಖ ಅಭಿವೃದ್ಧಿಗೆಮೀಸಲಾತಿಅಗತ್ಯತೆವಾಗಿದೆಎಂದರು. ಸಮಾಜಕಲ್ಯಾಣಇಲಾಖೆಯ ನಿವೃತ್ತಅಧಿಕಾರಿದಯಾನಂದ ಮಾತನಾಡಿ,ಜಾತಿಗಣತಿ ಸಮಯದಲ್ಲಿ ಆದಿ ಕನಾ9ಟಕ,ಆದಿ ದ್ರಾವಿಡ,ಆದಿ ಆಂದ್ರಯಾವುದೇಇರಲಿ ಉಪಜಾತಿಕಾಲಂನಲ್ಲಿ ಮಾದಿಗಎಂದೇ ಬರೆಸುವುದರಜತೆ ನಮೂದಿಸಿದನ್ನ ಖಚಿತಪಡಿಸಿಕೊಳ್ಳಿ ಎಂದರು. ಯುವಕಾಂಗ್ರೆಸ್‌ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಬು ಮಾತನಾಡಿ,ದಲಿತ ಸಂಘಟನೆಗಳು ಒಳ ಮೀಸಲಾತಿ ವಗಿ9ಕರಣದ ಹೋರಾಟದ ಫಲವಾಗಿ ಸುಪ್ರೀಂಕೋರ್ಟ್‌ತೀರ್ಪಿನಂತೆ ಒಳಮೀಸಲಾತಿ ಅವಕಾಶ ಒದಗಿಬಂದಿದೆ ಆಗಾಗಿ ಮಾದಿಗ ಸಮುದಾಯ ಸಹೋದರರು ಸಂಕೋಚದಿಂದಯಾವುದೇಕಾರಣಕ್ಕೂ ಎಸ್.ಸಿ ಎಂದು ಬರೆಸದೇಉಪಜಾತಿ ಕಾಲಂ 61ರಲ್ಲಿ ಮಾದಿಗಎಂದೇ ಬೆರೆಸಬೇಕುಎಂದರು.

# ಬುದ್ಧತ್ವ



**ಆರೋಗ್ಯ ಎಂಬುದು ದೊಡ್ಡ ಕೊಡುಗೆ, ಸಂತೃಪ್ತಿ ದೊಡ್ಡ ಸಂಪತ್ತು, ವಿಶ್ವಾಸಾರ್ಹತೆ ಎಂಬುದು ಅತ್ಯುತ್ತಮ ಸಂಬಂಧ.....**

ಗೌತಮ ಬುದ್ಧ....



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

ಇನ್ನೊಮ್ಮೆ ಓದಿ ನೋಡಿ. ಅರ್ಥಮಾಡಿಕೊಳ್ಳಲು ಪ್ರಯತ್ನಿಸಿ. ಬದುಕು ಇನ್ನು ಸಂಕೀರ್ಣವಾಗದ, ಅತ್ಯಂತ ಕಡಿಮೆ ಜನಸಂಖ್ಯೆಯ, ಯಾವುದೇ ಆಧುನಿಕ ತಂತ್ರಜ್ಞಾನ ಇಲ್ಲದ, ಪ್ರಕೃತಿಯ ಮಡಿಲಲ್ಲಿ ಇನ್ನೂ ಮನುಷ್ಯ ಮಗುವಾಗಿರುವಾಗಲೇ ಸಿದ್ಧಾರ್ಥನೆಂಬ ಗೌತಮ ಬುದ್ಧ ಈ ಮಾತುಗಳನ್ನು ತನ್ನ ಜ್ಞಾನೋದಯದ ನಂತರ ಹೇಳಿರುವುದಾದರೆ ಅವರ ದೂರದೃಷ್ಟಿ ಎಷ್ಟಿರಬಹುದು ಊಹಿಸಿ.

ನಾವು ಕಳೆದುಕೊಂಡಿರುವುದು ಏನು, ಹುಡುಕುತ್ತಿರುವುದು ಏನು, ಪಡೆಯಬೇಕಾಗಿರುವುದು ಏನು ಎಂಬುದನ್ನು ಅರಿಯಬಹುದು.

ಆರೋಗ್ಯ, ಸಂತೃಪ್ತಿ ವಿಶ್ವಾಸಾರ್ಹತೆ ಇದೇ ಇಂದು ನಮ್ಮಿಂದ ದೂರವಾಗಿ ಅತ್ಯಂತ ವಿರಳವಾಗಿ ಕಂಡುಬರುತ್ತಿದೆ. ಈ ಸಮಾಜದಲ್ಲಿ ಇವುಗಳ ಕೊರತೆ ತೀವ್ರವಾಗಿ ಕಾಡುತ್ತಿದೆ. ಯಾರನ್ನೇ ಕೇಳಿ ಇವುಗಳೇ ನಮ್ಮ ಬದುಕಿನಲ್ಲಿ ನಾವು ಕಳೆದುಕೊಳ್ಳುತ್ತಿರುವ ಅತ್ಯಮೂಲ್ಯ ಮೌಲ್ಯಗಳು ಎಂದೇ ಹೇಳುತ್ತಾರೆ.

### ಆರೋಗ್ಯ

ವೈದ್ಯಕೀಯವಿಜ್ಞಾನಎಷ್ಟುಮುಂದುವರಿದಿದೆ ಎಂದರೆ ವಿಶ್ವದಲ್ಲಿ ಕೆಲವೇ ಸಂಪೂರ್ಣ ಆರೋಗ್ಯವಂತ ಜನರು ಉಳಿದಿದ್ದಾರೆ. ಇದು ಹಾಸ್ಯ ಎನಿಸಿದರು ವಾಸ್ತವಕ್ಕೆ ಹತ್ತಿರವಿದೆ. ಆರೋಗ್ಯವೇ ಭಾಗ್ಯ ಅನಾರೋಗ್ಯವೇ ನರಕ ಎಂದು ತಿಳಿದಿದ್ದರು ಇಂದಿನ ವೇಗ ಮತ್ತು ಸ್ಪರ್ಧಾತ್ಮಕ ಸಮಾಜದಲ್ಲಿ ಆರೋಗ್ಯ ಸಾಕಷ್ಟು ಕೈಕೊಡುತ್ತಿದೆ. ಬಿಪಿ ಶುಗರ್ ಥೈರಾಯ್ಡ್ ಆಸ್ತಮಾ ಅಸಿಡಿಟಿ ಮೈಗ್ರೇನ್ ನಿದ್ರಾಹೀನತೆ ಖಿನ್ನತೆ ಇವುಗಳಲ್ಲಿ ಯಾವುದೂ ಒಂದು ಇಲ್ಲದ ಮಧ್ಯ ವಯಸ್ಸಿನ ಆರೋಗ್ಯವಂತ ವ್ಯಕ್ತಿ ಸಿಗುವುದು ತೀರಾ ಅಪರೂಪ. ಕೊರೋನಾ ನಂತರವಂತು ಆರೋಗ್ಯವೇ ಎಲ್ಲರ ಬದುಕಿನ ಬಹುದೊಡ್ಡ ಕಾಳಜಿಯಾಗಿದೆ. ನಮ್ಮ ಸಂಪಾದನೆ ಮತ್ತು ಉಳಿತಾಯವನ್ನು ನಾವು ಸುಖ ಪಡುವುದಕ್ಕಿಂತ ಅನಾರೋಗ್ಯದ ಭಯದಿಂದಲೇ ಸಂಗ್ರಹ ಮಾಡುವ ಅನಿವಾರ್ಯ ಮನಸ್ಥಿತಿಗೆ ಬಂದಿದ್ದೇವೆ. ಸಣ್ಣ ಖಾಯಿಲೆಗು ಲಕ್ಷಾಂತರ ಹಣ ಖರ್ಚು ಮಾಡಬೇಕಾಗಿದೆ. ಹಣದ ಮೋಹದ ಫಲವಿದು......

### ಸಂತೃಪ್ತಿ

ನಾನು ಈ ಬದುಕಿನಲ್ಲಿ ಸಂಪೂರ್ಣ ತೃಪ್ತ ಎನ್ನುವ ಜನರು ಸ್ವಲ್ಪ ಅಪರೂಪ. ಇನ್ನೂ ಕೆಲವರು ಮೇಲ್ನೋಟಕ್ಕೆ ಹೇಳಿದರು ಒಳಗೆ ನಾನಾ ರೀತಿಯ ಅತೃಪ್ತಿ ಇದ್ದೇ ಇರುತ್ತದೆ. ವಿದ್ಯಾಭ್ಯಾಸ, ಉದ್ಯೋಗ, ಮದುವೆ ಮಕ್ಕಳು ಹಣ ಸಂಬಂಧ ಎಲ್ಲದರಲ್ಲೂ ಏನಾದರೂ ಕೊರತೆ ಇದ್ದೇ ಇರುತ್ತದೆ. ಸಂತೃಪ್ತಿ ದೊಡ್ಡ ಸಂಪತ್ತು ಎಂದು ಬುದ್ದರು ಹೇಳಿದ್ದಾರೆ. ಆದರೆ ಈಗ ಆ ಸಂಪತ್ತಿನ ಒಡೆಯರು ತುಂಬಾ ಕಡಿಮೆ. ಕೊಳ್ಳುಬಾಕ ಸಂಸ್ಕೃತಿ, ಇತರರೊಂದಿಗೆ ಹೋಲಿಸಿಕೊಳ್ಳುವುದು, ಇಲ್ಲದಿರುವುದರ ಬಗ್ಗೆಯೇ ಹೆಚ್ಚು ಚಿಂತಿಸುವ ಕಾರಣದಿಂದ ನಮ್ಮಲ್ಲಿ ಸಂತೃಪ್ತಿ ಮಾಯವಾಗಿದೆ. ಇನ್ನೂ ಬೇಕು, ಇನ್ನೂ ಬೇಕು ಎನ್ನುವ ಬಯಕೆಗಳು ನಿಯಂತ್ರಿಸುವವರಗೆ ಅಸಂತೃಪ್ತಿ ನಿರಂತರ.......

### ವಿಶ್ವಾಸಾರ್ಹತೆ

ಎಲ್ಲಿ ಹುಡುಕುವುದು ಇದನ್ನು. ವಿಶ್ವಾಸಾರ್ಹತೆಯೇ ದೊಡ್ಡ ಸಂಬಂಧ ಎಂದು ಬುದ್ದರು ಹೇಳುತ್ತಾರೆ. ಯಾವ ಸಂಬಂಧಗಳಲ್ಲಿ ವಿಶ್ವಾಸಾರ್ಹತೆ ಉಳಿದಿದೆ. ಆತ್ಮ ವಂಚನೆ ಮಾಡಿಕೊಳ್ಳದೆ ಉತ್ತರಿಕೊಳ್ಳಿ.

ನಮ್ಮದೇ ಸಮಾಜದ ಒಂದು ಹೆಣ್ಣು ಒಂದು ಗಂಡು ನೋಡಿ ಮದುವೆ ಮಾಡಲು ಎಷ್ಟೊಂದು ಅಡ್ಡಿ ಆತಂಕಗಳು ಅನುಮಾನಗಳು ಕಾಡುತ್ತವೆ ಎಂಬುದು ಅನುಭವಿಗಳಿಗೆ ತಿಳಿದಿರುತ್ತದೆ. ನಂತರವೂ ಆ ಸಂಬಂಧ ದೀರ್ಘಕಾಲ ಉಳಿದರೆ ಅದೇ ದೊಡ್ಡ ಸಾಧನೆ. ಇನ್ನು ಸ್ನೇಹಿತರು, ಅಕ್ಕ ತಂಗಿ, ಅಣ್ಣ ತಮ್ಮ, ಅತ್ತೆ ಸೊಸೆ, ಅಪ್ಪ ಮಕ್ಕಳು, ಚಿಕ್ಕಪ್ಪ ದೊಡ್ಡಪ್ಪ ಎಂಬ ಸಂಬಂಧಗಳು ಅದೇ ಅರ್ಥದಲ್ಲಿ ಈಗಲೂ ತೀವ್ರ ಪ್ರೀತಿಯನ್ನು ಉಳಿಸಿಕೊಂಡಿದ್ದರೆ ನಿಮ್ಮನ್ನು ನೀವು ಅದೃಷ್ಟಶಾಲಿಗಳು ಎಂದೇ ಪರಿಗಣಿಸಿ.

ಯಾವುದೇ ಜಮೀನು, ಮನೆ, ವ್ಯಾಪಾರ, ವ್ಯವಹಾರಗಳಲ್ಲಿ ಎಲ್ಲಾ ರೀತಿಯ ಎಚ್ಚರಿಕೆಯ ನಂತರವೂ ಸಾಕಷ್ಟು ಅಡ್ಡಿ ಆತಂಕಗಳನ್ನು ಎದುರಿಸುವುದು, ಮೋಸ ಹೋಗುವುದು, ನ್ಯಾಯಾಲಯಗಳಿಗೆ ಅಲೆದಾಡುವುದು ನಮ್ಮ ಜೀವನದ ಭಾಗವೇ ಆಗಿದೆ. ಯಾರನ್ನು ಯಾರೂ ನಂಬದ ಸ್ಥಿತಿ ತಲುಪಿದ್ದೇವೆ.

ಕ್ರಿಸ್ತ ಪೂರ್ವದ ಬುದ್ದನ ಮಾತುಗಳು 2021 ರ ಈ ಕ್ಷಣದಲ್ಲಿ ನಿಂತು ಒಮ್ಮೆ ಅವಲೋಕಿಸಿ. ನಾವು ಸಾಗುತ್ತಿರುವ ದಿಕ್ಕಿನ ಬಗ್ಗೆಯೇ ನಮಗೆ ಅಸಮಾಧಾನ ಮೂಡಿಸುತ್ತದೆ.ಈಗಲೂ ಕಾಲ ಮಿಂಚಿಲ್ಲ. ಎಲ್ಲ ಸ್ಪರ್ಧೆ, ಆಧುನಿಕ ತಂತ್ರಜ್ಞಾನ, ವೇಗದ ನಡುವೆಯೂ ಮಾನವೀಯ ಮೌಲ್ಯಗಳನ್ನು ನಾವು ಕನಿಷ್ಠ ಪ್ರಮಾಣದಲ್ಲಿ ಉಳಿಸಿಕೊಳ್ಳಲು ಪ್ರಯತ್ನಿಸಿದರೆ ಖಂಡಿತ ಬುದ್ದನ ಹೇಳಿಕೆಗಳಲ್ಲಿರುವ ಆ ಮೌಲ್ಯಗಳನ್ನು ಅನುಭವಿಸಬಹುದು. ಅದಕ್ಕಾಗಿ ನಿರಂತರ ಪ್ರಯತ್ನ ಮಾಡಬೇಕಾಗಿದೆ.

ಅದನ್ನು ನಿಮಗೆ ಸದಾ ನೆನಪಿಸುವ ಪ್ರಯತ್ನ ಮನಸ್ಸುಗಳ ಅಂತರಂಗದ ಚಳವಳಿ ಸದಾ ಮಾಡುತ್ತದೆ......

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T